ಧಾರವಾಡ * ಕಾರವಾರ * ಹಾವೇರಿ * ಕೊಪ್ಪಳ * ಬಳ್ಳಾರಿ * ಬಾಗಲಕೋಟ * ವಿಜಯನಗರ * ಗದಗದಿಂದ ಏಕ ಕಾಲಕ್ಕೆ ಒಂದೇ ಸಂಚಿಕೆ ಪ್ರಕಟಗೊಳ್ಳುವ ದಿನ ಪತ್ರಿಕೆ



# ಸ್ನೇಹ ಜೀವಿ

ಉತ್ತರ ಕರ್ನಾಟಕದ ಧ್ವನಿ...!

SNEHAJEEVI KANNADA DAILY

ಕನ್ನಡ ದಿನಪತ್ರಿಕೆ




ಡಾ. ಎ.ಎನ್. ಶಾಲಗಾರ ಸಾರಥ್ಯದಲ್ಲಿ | MAG: PRBCR-10/2016-17 | Mob: 94827 70999 | e-mail: snehajeevidaily@gmail.com | Editor: Dr. A.N. Shalagar

RNI NO. KARKAN/2013/49379 | Volume / ಸಂಪುಟ : 14 | Issue / ಸಂಚಿಕೆ : 235 Date : 30-09-2025 ಮಂಗಳವಾರ Page / ಪುಟ : 4 | ಗದಗ–GADAG | Rs. 2/-

ಪುಟ -4 ಜೀವನದಲ್ಲಿ ಏನನ್ನಾದರೂ ಸಾಧಿಸಲು ಬಯಸುವವರು..

ಪುಟ -3 ಜಲಸಂಚಾಯಿ : ಗದಗ ದೇಶಕ್ಕೆ 4ನೇ ಸ್ಥಾನ, ರಾಜ್ಯಕ್ಕೆ ಮೊದಲು

ಪುಟ -2 ಗದಗ ಜಿಲ್ಲೆಯ ಬೆಳೆ ಹಾನಿಯ ವರದಿ ಶೀಘ್ರ ಸರ್ಕಾರಕ್ಕೆ ಸಲ್ಲಿಕೆ : ಎಚ್.ಕೆ

ಪುಟ -4 ಹಪ್ತಾ ಕೊಡಲೇಬೇಕೆಂದು ಪೀಡಿಸುತ್ತಿದ್ದ ಪೊಲೀಸರು...!

# ರಾಜ್ಯದಲ್ಲಿ ಸದ್ದಿಲ್ಲದೇ ಏರಿಕೆಯಾಗುತ್ತಿವೆ ಡೆಂಘೀ ಸೋಂಕಿನ ಪ್ರಕರಣಗಳು

❑ ಸ್ನೇಹಜೀವಿ ನ್ಯೂಸ್

ಬೆಂಗಳೂರು, ಸೆ.29– ವಾತವರಣದಲ್ಲಿ ಏರುಪೇರು ಆಗುತ್ತಿದ್ದಂತೆ ರಾಜ್ಯದಲ್ಲಿ ಸದ್ದಿಲ್ಲದೇ ಸಾಂಕ್ರಾಮಿಕ ಸೋಂಕುಗಳು ಏರಿಕೆಯಾಗ್ತಿವೆ. ಆದರಲ್ಲೂ ಮಾರಣಾಂತಿಕ ಡೆಂಘೀ ಪ್ರಕರಣಗಳು ಭಾರಿ ಪ್ರಮಾಣದಲ್ಲಿ ಏರಿಕೆಯಾಗುತ್ತಿರುವುದು ಆತಂಕಕ್ಕೆ ಕಾರಣವಾಗಿದೆ. ರಾಜ್ಯದಲ್ಲಿ ಇದುವರೆಗೂ ಡೆಂಘೀ ಸೋಂಕಿತರ ಸಂಖ್ಯೆ ಐದು ಸಾವಿರದ ಗಡಿ ದಾಟಿರುವುದು ವಿಶೇಷವಾಗಿದೆ.

ಇಡೀ ರಾಜ್ಯದಲ್ಲಿ ಡೆಂಘೀ ಪ್ರಕರಣಗಳು ಏರಿಕೆಯಾಗುತ್ತಿರುವುದರ ಜೊತೆಗೆ ಬೆಂಗಳೂ–ರಿನಲ್ಲೂ ಸೋಂಕು ಉಲ್ಬಣಗೊಂಡಿರುವುದು




ಕಂಡು ಬಂದಿದೆ. ಕಳೆದ ಒಂಬತ್ತು ತಿಂಗಳಿನಲ್ಲಿ ಇಡೀ ರಾಜ್ಯದಲ್ಲಿ 5093 ಕ್ಕೂ ಹೆಚ್ಚು ಡೆಂಘೀ ಪ್ರಕರಣಗಳು ಕಂಡು ಬಂದಿದ್ದರೆ, ರಾಜಧಾನಿ ಬೆಂಗಳೂರು ಒಂದರಲ್ಲೆ 2478 ಪ್ರಕರಣಗಳು ವರದಿಯಾಗಿರುವುದು ವಿಶೇಷವಾಗಿದೆ.

ಬೆಂಗಳೂರು ಹೊರತುಪಡಿಸಿ ರಾಜ್ಯಾದಾದ್ಯಂತ 2615 ಪ್ರಕರಣಗಳು ದೃಢಪಟ್ಟಿದ್ದು, ಈ ಸೋಂಕಿಗೆ ಈಡೀಸ್ ಈಜಿಪ್ಟೈ ಎಂಬ ಸೊಳ್ಳೆ ಕಡಿತವೇ ಕಾರಣವಾಗಿದೆ.ನಿಂತ ನೀರಲ್ಲಿ ಬೆಳೆಯುವ ಈ ಡೇಂಜರಸ್ ಸೊಳ್ಳೆ ಕಚ್ಚುವುದರಿಂದ ಡೆಂಘೀ ಗುಣಲಕ್ಷಣಗಳು ಕಂಡು ಬರುತ್ತಿವೆ.

ವಿಪರೀತ ಜ್ವರ, ತಲೆನೋವು, ಮೈಕೈ ನೋವು,ಕೀಲುನೋವು, ವಾಂತಿ– ವಾಕ–ರಿಕೆ,ಕಣ್ಣುಗಳ ಹಿಂಭಾಗದಲ್ಲಿ ನೋವು, ಊದಿಕೊಂಡ ಗ್ರಂಥಿಗಳು ಈ ಸೋಂಕಿನ ಲಕ್ಷಣಗಳಾಗಿರುತ್ತವೆ.

ಇಂತಹ ಲಕ್ಷಣಗಳು ಕಂಡು ಬಂದರೆ ತಕ್ಷಣ ಸಮೀಪದ ಪಾಲಿಕೆ ಆಸ್ಪತ್ರೆಗಳಿಗೆ ತೆರಳಿ ಸೂಕ್ತ ಚಿಕಿತ್ಸೆ ಪಡೆದುಕೊಳ್ಳುವಂತೆ ಆರೋಗ್ಯಾಧಿಕಾ–ರಿಗಳು ಮನವಿ ಮಾಡಿಕೊಂಡಿದ್ದಾರೆ.

## ಅ.೫ ರವರೆಗೆ ರಾಜ್ಯದ ಉತ್ತರ, ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆ ಮುನ್ಸೂಚನೆ!

**ಬೆಂಗಳೂರು,**ರಾಜ್ಯದಲ್ಲಿ ಸೆ.30 ಕರಾವಳಿ ಜಿಲ್ಲೆಗಳು, ಉತ್ತರ ಒಳನಾಡಿನ ಬಾಗಲಕೋಟೆ, ಬೆಳಗಾವಿ, ಬೀದರ್, ಧಾರವಾಡ, ಗದಗ, ಹಾವೇರಿ,

ವಿಜಯಪುರ ಹಾಗೂ ದಕ್ಷಿಣ ಒಳನಾಡಿನ ಬಳ್ಳಾರಿ, ಬೆಂಗಳೂರು, ಚಾಮರಾಜನಗರ, ಚಿಕ್ಕ ಬಳ್ಳಾ ಪುರ, ಚಿತ್ರದುರ್ಗ, ದಾವಣಗೆರೆ, ಹಾಸನ, ಕೋಲಾರ, ಮಂಡ್ಯ , ಮೈಸೂರು, ರಾಮನಗರ, ತುಮಕೂರು, ವಿಜಯನಗರ ಸೇರಿ ವಿವಿಧ ಜಿಲ್ಲೆ ಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆಮುನ್ಸೂಚನೆಮಾಹಿತಿ ನೀಡಿದೆ.

ಇನ್ನು ಬೆಂಗಳೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮುಂದಿನ 48 ಗಂಟೆಗಳವರೆಗೆ ಸಾಮಾನ್ಯ ವಾಗಿಮೋಡ ಕವಿದ ವಾತಾವರಣ ಇರಲಿದ್ದು , ತಾಪಮಾನವು ಕ್ರಮವಾಗಿ 29ಲಿಅ ಮತ್ತು 20ಲಿಅ ಆಗುವ ಸಾಧ್ಯತೆ ಇದೆ.

ಅ.01ರಂದು ಕೂಡ ಕರಾವಳಿ ಜಿಲ್ಲೆಗಳು, ಬಾಗಲಕೋಟೆ, ಬೆಳಗಾವಿ, ಬೀದರ್, ಧಾರವಾಡ, ಗದಗ, ಹಾವೇರಿ, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ, ಯಾದಗಿರಿ ಹಾಗೂ ದಕ್ಷಿ ಣ ಒಳನಾಡಿನ ಬಳ್ಳಾರಿ, ಬೆಂಗಳೂರು, ಚಾಮರಾಜನಗರ, ಹಾಸನ, ಕೊಡಗು, ಕೋಲಾರ,ಮಂಡ್ಯ , ಮೈಸೂರು, ರಾಮನಗರ, ಶಿವಮೊಗ್ಗ,ತುಮಕೂರು, ವಿಜಯನಗರ ಸೇರಿ ಹಲವು ಜಿಲ್ಲೆ ಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆ ಇದೆ.



❑ ಸ್ನೇಹಜೀವಿ ನ್ಯೂಸ್

ಕುಂದಗೋಳ ತಾಲೂಕಿನ ಗುರುವಿನಹಳ್ಳಿಯಲ್ಲಿ ಹಾಗೂ ಮಳಲಿಯಲ್ಲಿ ಪ್ರಾನ್ಸಿ ಯೋಜನೆಯಡಿಯಲ್ಲಿ ಶಿರಹಟ್ಟಿಯ ಶ್ರೀ ಜಗದ್ಗುರು ಫಕೀರೇಶ್ವರ ಸಂಸ್ಥಾನ ಮಠದ ಪೂಜ್ಯ ಶ್ರೀ ಜಗದ್ಗುರು ಫಕೀರೇಶ್ವರ ಶಿವಯೋಗಿ ಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ಗುರುವಿನಹಳ್ಳಿ–ಮಳಲಿ ಸಂಪರ್ಕಿಸುವ ರಸ್ತೆಯ ಕಾಮಗಾರಿಗೆ ಭೂಮಿ ಪೂಜೆ ಮಾಡುವ ಮೂಲಕ ಚಾಲನೆ ನೀಡಿದ ಕ್ಷಣಗಳು. 3 ಕೋಟಿ 30 ಲಕ್ಷ ವೆಚ್ಚದಲ್ಲಿ ಈ ಸಂಪರ್ಕ ರಸ್ತೆ ನಿರ್ಮಾಣವಾಗಲಿದೆ. ಈ ಸಂಪರ್ಕ ರಸ್ತೆಯಿಂದಾಗಿ ಎರಡು ಗ್ರಾಮಸ್ಥರಿಗೆ ಮತ್ತು ಅಕ್ಕ ಪಕ್ಕದ ಗ್ರಾಮದಲ್ಲಿ ವಾಸಿಸುವ ಜನರಿಗೆ ಸಂಚಾರ ಸುಲಭವಾಗಲಿದೆ. ಈ ಸಂದರ್ಭದಲ್ಲಿ ನಮ್ಮೊಂದಿಗೆ ಕುಂದಗೋಳ ಶಾಸಕರಾದ ಎಮ್ ಆರ್ ಪಾಟೀಲ, ಕುಂದಗೋಳ ತಾಲೂಕ ಅಧ್ಯಕ್ಷರು, ಗಣ್ಯರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

# ಸಚಿವ ಸಂಪುಟ ವಿಸ್ತರಣೆ ಫಿಕ್ಸ್; ಬಿ.ನಾಗೇಂದ್ರ ಮತ್ತೆ ಸಚಿವರಾಗುತ್ತಾರೆ ಎಂದ ಜಮೀರ್ ಅಹ್ಮದ್

❑ ಸ್ನೇಹಜೀವಿ ನ್ಯೂಸ್

**ಬೆಂಗಳೂರು, ಶೀಘ್ರದಲ್ಲೇ ಸಚಿವ ಸಂಪುಟ ವಿಸ್ತರಣೆಯಾಗಲಿದ್ದು, ಇನ್ನು 10 ದಿನಗಳಲ್ಲಿ ಬಿ.ನಾಗೇಂದ್ರ ಅವರು ಮತ್ತೆ ಸಚಿವರಾಗಲಿದ್ದಾರೆ ಎಂಬುದಾಗಿ ವಸತಿ ಸಚಿವ ಜಮೀರ್ ಅಹ್ಮ ದ್ ತಿಳಿಸಿದ್ದಾರೆ. ನಗರದಲ್ಲಿ ಸುದ್ದಿಗಾರರೊಂದಿಗೆಮಾತನಾಡಿರುವ ಅವರು, ಯಾವುದೇ ಕ್ಷಣದಲ್ಲಾದರೂ ಸಚಿವ ಸಂಪುಟ ವಿಸ್ತರಣೆ ಆಗಬಹುದು.**

ನಮ್ಮ ಕೈಯಲ್ಲಿ ನಿರ್ಧಾರ ಇಲ್ಲ .ಹೈಕಮಾಂಡ್ನೋಡಿಕೊಳ್ಳಲಿದೆ ಎಂದು ಹೇಳಿದ್ದಾರೆ.ಬಿ.ನಾಗೇಂದ್ರ ಅವರು ಮತ್ತೆ ಸಚಿವರಾಗುತ್ತಾರೆ. 10 ದಿನಗಳಲ್ಲಿ

ಬಿ.ನಾಗೇಂದ್ರಗೆ ಮತ್ತೆ ಸಚಿವ ಸ್ಥಾನ ಸಿಗಲಿದೆ ಎಂಬ ಭರವಸೆ ಇದೆ. ಇನ್ನು ಸಿದ್ದರಾಮಯ್ಯನವರೇ 5 ವರ್ಷ ಸಿಎಂ



ಆಗಿಮುಂದುವರಿಯುತ್ತಾರೆ ತಿಳಿಸಿದ್ದಾರೆ.

ಬಳ್ಳಾರಿ ಜಿಲ್ಲೆಯಲ್ಲಿ ಯಾವ ಕೆಲಸಗಳು ಪೆಂಡಿಂಗ್ ಉಳಿದಿಲ್ಲ.ಎಲ್ಲಾ ಕೆಲಸ ಕಾರ್ಯಗಳು ನಡೆಯುತ್ತಿವೆ.

ನಾಗೇಂದ್ರ ಮೂಲಕ ಸಮಸ್ಯೆಗಳ ಬಗ್ಗೆನನಗೆಮಾಹಿತಿ ಬರುತ್ತಿದೆ. ಸಾಹಿತ್ಯ ಸಮ್ಮೇಳನ ನಡೆಸಲು ನಾಲ್ಕು ಸ್ಥಳ ಗುರುತಿಸಲಾಗಿದೆ. ಬಳ್ಳಾರಿ ಶಾಸಕರೊಂದಿಗೆ ಸೇರಿ ಸ್ಥಳ ಪರಿಶೀಲನೆ ಮಾಡುತ್ತೇನೆ. ಬಳ್ಳಾರಿಯಲ್ಲಿ ಅದ್ದೂರಿಯಾಗಿ ಸಾಹಿತ್ಯ ಸಮ್ಮೇಳನ ನಡೆಯಲಿದೆ ಎಂದು ಹೇಳಿದ್ದಾರ.



❑ ಸ್ನೇಹಜೀವಿ ನ್ಯೂಸ್

ಧಾರವಾಡದ ಸೋನಿಯಾ ಎಜುಕೇಶನ್ ಟ್ರಸ್ಟ್ ವತಿಯಿಂದ ಪ್ರಥಮ ವರ್ಷದ ಬಿಎ ಹಾಗೂ ಬಿಕಾಂ ವಿದ್ಯಾರ್ಥಿನಿಯರಿಗೆ ಸ್ವಾಗತ ರಾಂಕ್ ವಿಜೇತರಿಗೆ ಬಹುಮಾನ ವಿತರಣೆ ಸಮಾರಂಭದಲ್ಲಿ ರಾಬರ್ಟ್ ದದ್ದಾಪುರಿ ಪ್ರಧಾನ ಕಾರ್ಯದರ್ಶಿಗಳು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ & ಸಿಂಡಿಕೇಟ್ ಸದಸ್ಯರು ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಸಂದರ್ಭ.ಅಧ್ಯಕ್ಷತೆಯನ್ನು ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರು ಮಾಜಿ ಮಹಾಪೌರರು ಆದ ಎಚ್ ವಿ ಡಂಬಲ್ ವಹಿಸಿದ್ದರು.



❑ ಸ್ನೇಹಜೀವಿ ನ್ಯೂಸ್

ದಸರಾ ಅಂಗವಾಗಿ ಭಾನುವಾರ ಮೈಸೂರಿನಲ್ಲಿ ವಿವಿಧ ಶ್ವಾನಗಳ ಪ್ರದರ್ಶನ ಜನರನ್ನು ಆಕರ್ಷಿಸಿತು.



❑ ಸ್ನೇಹಜೀವಿ ನ್ಯೂಸ್

ಹುಬ್ಬಳ್ಳಿಯ : ಐತಿಹಾಸಿಕ ಉಣಕಲ್ ಕೆರೆ ಮತ್ತಷ್ಟು ಆಕರ್ಷಣೀಯವಾಗಲಿದೆ. ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಉಣಕಲ್ ಕೆರೆಯಲ್ಲಿ 'ವಾಟರ್ ಸ್ಪೋರ್ಟ್ಸ್ ಹಾಗೂ ಅಡ್ವೆಂಚರ್' ಕ್ರೀಡಾ ವ್ಯವಸ್ಥೆಗೆ ಚಾಲನೆ ನೀಡಿದೆನು.

ನಮ್ಮ ಭಾಗದ ಜನರಿಗೆ ಜಲ ಕ್ರೀಡೆಯಲ್ಲಿ ಹೆಚ್ಚಾಗಿ ಭಾಗವಹಿಸಿ, ಮನೋರಂಜನೆಗೆ ಹೇಳಿ ಮಾಡಿಸಿದ ಜಾಗವಾಗಿದೆ. ಸ್ವಚ್ಛಂದವಾದ ಉಣಕಲ್ ಕೆರೆಯಲ್ಲಿ ಕುಟುಂಬ, ಪರಿವಾರ ಒಂದಷ್ಟು ಗುಣಮಟ್ಟದ ಸಮಯವನ್ನು ಪರಿಸರದ ಜೊತೆ ಕಳೆಯಲು ಉತ್ತಮ ಆಕರ್ಷಣೆಯ ಸ್ಥಳವಾಗಿ ಮಾಡಲಾಗಿದೆ.

ಈ ವೇಳೆ ಶಾಸಕರಾದ ಮಹೇಶ್ ಟೆಂಗಿನಕಾಯಿ ಮಹಾನಗರ ಪಾಲಿಕೆಯ ಮಹಾಪೌರರಾದ ಶ್ರೀಮತಿ ಜ್ಯೋತಿ ಪಾಟೀಲ, ಉಪಮಹಾಪೌರರಾದ ಸಂತೋಷ್ ಚೌವಾಣ, ಪಾಲಿಕೆಯ ಸದಸ್ಯರು, ಆಯುಕ್ತರು, ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ: ಮೊದಲ ಸ್ಥಾನದಲ್ಲಿ ಹಾವೇರಿ,ಕೊಪ್ಪಳ ಜಿಲ್ಲೆ 2ನೆಯ ಸ್ಥಾನದಲ್ಲಿದೆ.ಗದಗ 3ನೇ ಸ್ಥಾನದಲ್ಲಿದ್ದರೆ...!



❑ ಸ್ನೇಹಜೀವಿ ನ್ಯೂಸ್

**ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯಲ್ಲಿ ಹಾವೇರಿ ರಾಜ್ಯದಲ್ಲಿಯೇ ಮೊದಲ ಸ್ಥಾನದಲ್ಲಿದೆ. ಶಿಕ್ಷಕರ ಈ ಕಾರ್ಯಕ್ಕೆ ಜಿಲ್ಲಾಧಿಕಾರಿಯವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.**

ಹಾವೇರಿ: ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ರಾಜ್ಯವ್ಯಾಪಿ ನಡೆಸುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಪ್ರಗತಿಯಲ್ಲಿ ಜಿಲ್ಲೆ ಮೊದಲ ಸ್ಥಾನದಲ್ಲಿದೆ. ಜಿಲ್ಲೆಯ 3777 ಗಣತಿದಾರರ ಕೆಲಸಕ್ಕೆ ಹಾವೇರಿ ಜಿಲ್ಲಾಧಿಕಾರಿ ಡಾ. ವಿಜಯ ಮಹಾಂತೇಶ್ ದಾನಮ್ಮನವರ್ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಜಿಲ್ಲೆಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರು ಸೇರಿದಂತೆ 3777 ಜನರಿಗೆ ಗಣತಿ ತರಬೇತಿ ನೀಡಿದ್ದು, ತಾಂತ್ರಿಕ ಸಮಸ್ಯೆಗಳ ನಡುವೆಯೂ ಉತ್ತಮ ಕಾರ್ಯ ಮಾಡುತ್ತಿದ್ದಾರೆ. ಜಿಲ್ಲೆಯಲ್ಲಿ 4,12,000 ಮನೆಗಳಿವೆ. ಅವುಗಳಲ್ಲಿ 95,284 ಮನೆಗಳ ಸರ್ವೆ ಆಗಿದೆ. ಒಂದೇ ದಿನದಲ್ಲಿ 28,130 ಮನೆಗಳ ಸಮೀಕ್ಷೆ ನಡೆಸಲಾಗಿದೆ.

ಕ್ಷೇತ್ರ ಶಿಕ್ಷಣಾಧಿಕಾರಿ ಎಂ. ಹೆಚ್. ಪಾಟೀಲ್, ಹಿಂದುಳಿದ ವರ್ಗಗಳ ಜಿಲ್ಲಾ ಕಲ್ಯಾಣಾಧಿಕಾರಿ ಡಾ. ಸುಬ್ಬರಾಯ್ ನಾಯಕ್ ಹಾಗೂ ಜಿಲ್ಲಾಧಿಕಾರಿ ಡಾ. ವಿಜಯ ಮಹಾಂತೇಶ್ ದಾನಮ್ಮನವರ್ ಅವರು ಮಾತನಾಡಿದ್ದಾರೆ.

ರಾಜ್ಯದಲ್ಲಿ 1,43,000,00 ಲಕ್ಷ ಮನೆಗಳ ಸಮೀಕ್ಷೆಗೆ ಹೋಲಿಸಿದರೆ ಹಾವೇರಿ ಜಿಲ್ಲೆ ಪ್ರಥಮ ಸ್ಥಾನದಲ್ಲಿದೆ.

ಜಿಲ್ಲೆಯಲ್ಲಿ 3777 ಗಣತಿದಾರರು ಪ್ರತಿದಿನ 33,276 ಮನೆಗಳ ಸಮೀಕ್ಷೆಯ ಗುರಿ ಇಟ್ಟುಕೊಂಡಿದ್ದಾರೆ. ಈಗಾಗಲೇ ಜಿಲ್ಲೆಯಲ್ಲಿ 35 ಪ್ರತಿಶತ ಸಮೀಕ್ಷೆ ಮಾಡಲಾಗಿದೆ. ಕೊಪ್ಪಳ ಜಿಲ್ಲೆ ಎರಡನೆಯ ಸ್ಥಾನದಲ್ಲಿದೆ. ಗದಗ ಮೂರನೇ ಸ್ಥಾನದಲ್ಲಿದ್ದರೆ, ಕೊನೆಯ ಸ್ಥಾನದಲ್ಲಿ ಬೆಂಗಳೂರು ನಗರವಿದೆ. ತಾಂತ್ರಿಕ ತಂಡ ಸಹ ಉತ್ಸುಕವಾಗಿದ್ದು, ಸಮಸ್ಯೆಗಳಿಗೆ ಶೀಘ್ರವೇ ಪರಿಹಾರ ಕಂಡುಕೊಳ್ಳುತ್ತಿದೆ.

ಈ ಕುರಿತು ಕ್ಷೇತ್ರ ಶಿಕ್ಷಣಾಧಿಕಾರಿ ಎಂ. ಹೆಚ್. ಪಾಟೀಲ್ ಅವರು ಮಾತನಾಡಿ, 'ನಮ್ಮ ಜಿಲ್ಲೆಯಲ್ಲಿ ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆ ಚೆನ್ನಾಗಿ ನಡೆದಿದೆ. ನಮ್ಮ ಗಣತಿದಾರರು ಆಕ್ಟಿವ್ ಇದ್ದಾರೆ. ಎಲ್ಲರೂ ಕೂಡಾ ಬೆಳಗ್ಗೆಯಿಂದಲೇ ಫೀಲ್ಡ್‌ನಲ್ಲಿರುತ್ತಾರೆ. ಈಗಿರುವ ಅಪ್ ತುಂಬಾ ಫಾಸ್ಟ್ ಆಗಿದೆ. ಸಜ್ಜನ ಎಂಬ ಶಿಕ್ಷಕರು 53 ಮನೆಯ ಸಮೀಕ್ಷೆ ಮಾಡಿದ್ದಾರೆ. ಕುಗ್ರಾಮಗಳಲ್ಲಿ ನೆಟ್‌ವರ್ಕ್ ಪ್ರಾಬ್ಲಂ ಇದೆ' ಎಂದಿದ್ದಾರೆ.

ಶಿಕ್ಷಕರು;ನಿಮ್ಮ ಅಪ್‌ನಿಂದ ವೈಯಕ್ತಿಕ ಮಾಹಿತಿ ಸೋರಿಕೆಯಾಗುತ್ತದೆಯೇ? ಎಂಬ ಪ್ರಶ್ನೆಗೆ, 'ನಮ್ಮ ಹಿರಿಯ ಅಧಿಕಾರಿಗಳ ಮಾಹಿತಿಯ ಪ್ರಕಾರ ವೈಯಕ್ತಿಕವಾಗಿ ಯಾವುದೇ ಸೋರಿಕೆಯಾಗುವುದು ಆಗಲ್ಲ, ಯಾರೂ ಕೂಡಾ ಇದಕ್ಕೆ ಭಯಪಡುವ ಅವಶ್ಯಕತೆ ಇಲ್ಲ. ಗ್ರಾಮೀಣ ಭಾಗದಲ್ಲಿ ಈ ಸರ್ವೇಗೆ ಯಾರೊಬ್ಬರು ನಿರಾಕರಣೆ ಮಾಡಿರುವುದು ಕಂಡುಬಂದಿಲ್ಲ' ಎಂದು ಸ್ಪಷ್ಟಪಡಿಸಿದ್ದಾರೆ.

ಹಿಂದುಳಿದ ವರ್ಗಗಳ ಜಿಲ್ಲಾ ಕಲ್ಯಾಣಾಧಿಕಾರಿ ಡಾ. ಸುಬ್ಬರಾಯ್ ನಾಯಕ್ ಅವರು ಮಾತನಾಡಿದ್ದು, 'ಈಗಾಗಲೇ ಟೀಚರ್ಸ್ ಅನ್ನು ತೆಗೆದುಕೊಂಡು ಸಮೀಕ್ಷೆಯನ್ನು ಪ್ರಾರಂಭಿಸಿದ್ದೇವೆ. ಯಶಸ್ವಿಯಾಗಿ ಕೆಲಸ ನಡೆಯುತ್ತಿದೆ. ಮನೆ ಮನೆಗೆ ಹೋಗಿ ಸಮೀಕ್ಷೆಯನ್ನು ಕೈಗೊಂಡಿರುತ್ತಾರೆ. ನಾಗರಿಕರು ಈ ಸಮೀಕ್ಷೆಯ ಯಶಸ್ಸಿಗೆ ಸಹಕರಿಸಲಿ' ಎಂದು ಮನವಿ ಮಾಡಿದ್ದಾರೆ.

### ಮನೆಯೊಂದರಲ್ಲಿ ಸಮೀಕ್ಷೆ ನಡೆಸಿದ ಶಿಕ್ಷಕರು:

ಜಿಲ್ಲಾಧಿಕಾರಿ ಡಾ. ವಿಜಯ ಮಹಾಂತೇಶ್ ದಾನಮ್ಮನವರ್ ಮಾತನಾಡಿ, 'ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯಲ್ಲಿ ಹಾವೇರಿ ಜಿಲ್ಲೆ ರಾಜ್ಯದಲ್ಲಿಯೇ ಮುಂಚೂಣಿಯಲ್ಲಿದೆ. ನಮ್ಮ ಜಿಲ್ಲೆಯಲ್ಲಿ ಸುಮಾರು 4,16,000 ಮನೆಗಳನ್ನು ಸಮೀಕ್ಷೆ ಮಾಡಬೇಕಾಗಿದೆ. ಇಲ್ಲಿಯವರೆಗೆ ಸುಮಾರು 1,50,000 ಮನೆಗಳನ್ನು ಸಮೀಕ್ಷೆ ಮಾಡಿದ್ದೇವೆ. ಪ್ರತಿಶತ 35 ರಷ್ಟು ಸಮೀಕ್ಷೆ ಆಗಿದೆ. ನಮ್ಮ ಜಿಲ್ಲೆಯ ಎಲ್ಲಾ ಶಿಕ್ಷಕರು ಈ ಸಮೀಕ್ಷೆಯಲ್ಲಿ ಭಾಗವಹಿಸಿದ್ದಾರೆ. ನಮಗೆ ಯಾವುದೇ ರೀತಿಯ ತೊಂದರೆ ಇಲ್ಲ. ಅವರು ಬಹಳಷ್ಟು ಆಸಕ್ತಿವಹಿಸಿ ಜವಾಬ್ದಾರಿಯಿಂದ ಕೆಲಸ ಮಾಡುತ್ತಿರುವುದರಿಂದಾಗಿ ನಾವು ರಾಜ್ಯದಲ್ಲಿ ಮೊದಲನೇ ಸ್ಥಾನದಲ್ಲಿದ್ದೇವೆ' ಎಂದು ತಿಳಿಸಿದ್ದಾರೆ.

# ಗದಗ ಜಿಲ್ಲೆಯ ಬೆಳೆ ಹಾನಿಯ ವರದಿ ಶೀಘ್ರ ಸರ್ಕಾರಕ್ಕೆ ಸಲ್ಲಿಕೆ : ಎಚ್.ಕೆ

❑ ಸ್ನೇಹಜೀವಿ ನ್ಯೂಸ್

ಗದಗ, ಸೆ. 29: ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ಬೆಳೆ ಹಾನಿಯಾಗಿದ್ದರ ಕುರಿತು ಈಗಾಗಲೇ ಜಂಟಿ ಸಮೀಕ್ಷೆ ಕಾರ್ಯ ನಡೆಸಲಾಗಿದೆ. ಕೃಷಿ ಇಲಾಖೆಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಒಟ್ಟಾರೆ 1,12,438 ಹೆಕ್ಟೇರ ಪ್ರದೇಶ ಬೆಳೆ ಹಾನಿಯಾಗಿದೆ. ಎನ್.ಡಿ.ಆರ್.ಎಫ್ ಪ್ರಕಾರ 121.33 ಕೋಟಿ ರೂ ಪರಿಹಾರ ನೀಡಲು ಪ್ರಸ್ತಾವನೆ ಸಿದ್ಧಪಡಿಸಲಾಗಿದ್ದು ಶೀಘ್ರವೇ ಸರಕಾರಕ್ಕೆ ಸಲ್ಲಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಎಚ್.ಕೆ.ಪಾಟೀಲ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಬೆಳೆ ಹಾನಿ ಸಮೀಕ್ಷೆ ಹಾಗೂ ಜನತಾ ದರ್ಶನ , ಪ್ರಗತಿ ಪರಿಶೀಲನೆ ಸಭೆ ಜರುಗಿಸಿ ನಂತರ ಪತ್ರಿಕಾಗೋಷ್ಠಿಯನ್ನುದ್ದೆಶಿಸಿ ಅವರು ಮಾತನಾಡಿದರು.

ತೋಟಗಾರಿಕೆ ಇಲಾಖೆಗೆ ಸಂಬಂಧಿಸಿದಂತೆ 11,348 ಹೆಕ್ಟೇರ್ ಪ್ರದೇಶ ತೋಟಗಾರಿಕೆ ಬೆಳೆ ಹಾನಿಯಾಗಿದೆ. ಎನ್.ಡಿ.ಆರ್.ಎಫ್. ಪ್ರಕಾರ 10.36 ಕೋಟಿ ರೂ. ಪರಿಹಾರಕ್ಕಾಗಿ ಪ್ರಸ್ತಾವನೆ ಸಿದ್ಧಪಡಿಸಲಾಗಿದೆ. ಕೃಷಿ ಬೆಳೆ ಹಾನಿಗೆ ಸಂಬಂಧಿಸಿದಂತೆ 4337 ರೈತರಿಂದ ಆಕ್ಷೇಪಣೆಗಳು ಸಲ್ಲಿಕೆಯಾಗಿವೆ. ಅವುಗಳನ್ನು ಪರಿಶೀಲಿಸಿ ವರದಿಯಲ್ಲಿ ಅಳವಡಿಸಲಾಗುವುದು. ಕೃಷಿಗೆ ಸಂಬಂಧಿಸಿದಂತೆ 4.36 ಕೋಟಿ ರೂ ಹಾಗೂ ತೋಟಗಾರಿಕೆ ಸಂಬಂಧಿಸಿದಂತೆ ಹೆಚ್ಚುವರಿಯಾಗಿ 1 ಕೋಟಿ ರೂ. ಪರಿಹಾರ ನೀಡಲು ಪ್ರಸ್ತಾವನೆಯಲ್ಲಿ ಸೇರಿಸಿ ಸಲ್ಲಿಸಲಾಗುವುದು ಸಚಿವ ಎಚ್.ಕೆ.ಪಾಟೀಲ ಅವರು ತಿಳಿಸಿದರು.



**ಜನತಾ ದರ್ಶನ :** ಜನರ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ಕಲ್ಪಿಸುವ ಮಹಾತ್ವಾಕಾಂಕ್ಷಿ ಜನತಾ ದರ್ಶನ ಕಾರ್ಯಕ್ರಮ ಪರಿಣಾಮಕಾರಿಯಾಗಿ ಜರುಗಿಸಲಾಗಿದೆ. ಜನತಾ ದರ್ಶನದಲ್ಲಿ ಸ್ವೀಕೃತವಾದ ಅರ್ಜಿಗಳ ಶೀಘ್ರ ವಿಲೇವಾರಿಗೆ ಕ್ರಮ ವಹಿಸಲು ಸೂಚಿಸಲಾಗಿದೆ. ಜನತಾ ದರ್ಶನದಲ್ಲಿ ವಿಲೇವಾರಿಯಾಗದ ಅರ್ಜಿಗಳಲ್ಲಿ ಕೆಲವೊಂದು ಅರ್ಜಿಗಳು ಅನುದಾನದ ಲಭ್ಯತೆ ಇಲ್ಲದೇ ವಿಲೇವಾರಿಯಾಗಿರುವುದಿಲ್ಲ. ಸಂಬಂಧಿತ ಇಲಾಖೆಯ ಅಧಿಕಾರಿಗಳು ಮೇಲಾಧಿಕಾರಿಗಳೊಂದಿಗೆ ಸಂಪರ್ಕಿಸಿ ಅನುದಾನ ತರಿಸಿಕೊಂಡು ಅರ್ಜಿ ವಿಲೇವಾರಿಗೆ ಕ್ರಮ ವಹಿಸಬೇಕು. ಇನ್ನು ಕೆಲವು ಅರ್ಜಿಗಳ ವಿಲೇವಾರಿಗಾಗಿ ಆಯ್ಕೆ ಸಮಿತಿ ಸಭೆಗಳನ್ನು ಮಾಡಬೇಕಾಗಿದೆ. ಹೀಗೆ ವಿವಿಧ ಹಂತದಲ್ಲಿ ಬಾಕಿ ಇರುವ ಅರ್ಜಿಗಳ ವಿಲೇವಾರಿಗೆ ಇಲಾಖೆ ಅಧಿಕಾರಿಗಳು ಅಕ್ಟೋಬರ್ 10 ನೇ ತಾರಿಖಿನೊಳಗಾಗಿ ವಿಲೇವಾರಿ ಮಾಡಿ ಜಿಲ್ಲಾಧಿಕಾರಿಗಳಿಗೆ ವರದಿ ಸಲ್ಲಿಸಲು ತಿಳಿಸಲಾಗಿದೆ ಎಂದರು.

**ಪ್ರಭುವಿನೆಡೆಗೆ ಪ್ರಭುತ್ವ :** ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮದಲ್ಲಿ ಒಟ್ಟು 21 ದೂರು ದಾಖಲಾಗಿವೆ.. 13 ದೂರುಗಳಿಗೆ ಸಂಪೂರ್ಣ ಪರಿಹಾರ ಒದಗಿಸಲಾಗಿದೆ. 2 ಮನವಿಗಳು ಯೋಜನೆ ಅಳವಡಿಕೆ ಕುರಿತಂತೆ ಹಾಗೂ 5 ಅರ್ಜಿಗಳು ಬಾಕಿ ಇವೆ. ಬಾಕಿ ಇರುವಂತಹ ದೂರುಗಳ ಕುರಿತು ಶೀಘ್ರ ಕ್ರಮ ವಹಿಸಲು ಸೂಚಿಸಲಾಗಿದೆ.

**ಅಮಾನತ್ತು :** ಗದಗ ತಹಶೀಲ್ದಾರರ ಕಚೇರಿಯಲ್ಲಿ ಸಂಧ್ಯಾ ಸುರಕ್ಷಾ, ವಿಧವಾ ವೇತನ, ವೃದ್ಧಾಪ್ಯ ವೇತನ ಕುರಿತಂತೆ ಸಾಮಾಜಿಕ ಭದ್ರತಾ ಯೋಜನೆಗಳಡಿ ಅನರ್ಹರಿಗೆ ಮಂಜೂರಾತಿ ಆರೋಪದಡಿ ಉಪ ತಹಶೀಲ್ದಾರ ಡಿ.ಟಿ.ವಾಲ್ಮೀಕಿ ಅವರನ್ನು ಅಮಾನತ್ತು ಗೊಳಿಸಿ ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿದ್ದಾರೆ. ಸಾರ್ವಜನಿಕರಿಂದ ದೂರು ಬಂದ ಹಿನ್ನೆಲೆಯಲ್ಲಿ ಇಂದು ನಾನೇ ಖುದ್ದಾಗಿ ಕಚೇ-ರಿಗೆ ಹೋಗಿ ಪರಿಶೀಲನೆ ನಡೆಸಲಾಗಿ ಅನರ್ಹರಿಗೆ ಪಿಂಚಣಿ ಮಂಜೂರು ಮಾಡಿರುವ ಕುರಿತು ಕಂಡು ಬಂದ ಹಿನ್ನೆಲೆಯಲ್ಲಿ ಅಮಾನತ್ತು ಕ್ರಮ ವಹಿಸಲಾಗಿದೆ.

ಜಿಲ್ಲೆಯಲ್ಲಿ 17,997 ಅನರ್ಹರಿಗೆ ಪಿಂಚಣಿ ಮಂಜೂರಾತಿ ಆಗಿರುವುದು ತಿಳಿದು ಬಂದಿದ್ದು ಇದರ ಸತ್ಯಾಸತ್ಯತೆಗಾಗಿ ಸಂಪೂರ್ಣ ತನಿಖೆಗೆ ಸೂಚಿಸಲಾಗಿದೆ. ಅನರ್ಹರಿಗೆ ವಿತರಣೆಯಾಗುತ್ತಿರುವ ಪಿಂಚಣಿ ಹಣ ತಕ್ಷಣ ನಿಲ್ಲಿಸಬೇಕೆಂದು ಈಗಾಗಲೇ ಸೂಚನೆ ನೀಡಲಾಗಿದೆ. ಜಿಲ್ಲಾಧಿಕಾರಿಗಳು ಈ ಕುರಿತು ಸಾಕಷ್ಟು ವಿಚಾರಣೆ ನಡೆಸಿ ಅನರ್ಹರಿಗೆ ಕೊಡುವಂತಹ ಸೌಲಭ್ಯ ನಿಲ್ಲಿಸುವ ಕುರಿತು ಇಲಾಖೆಯ ಕಾರ್ಯದರ್ಶಿಗಳಿಗೆ ಪತ್ರ ಬರೆದಿದ್ದಾರೆ ಎಂದು ಹೇಳಿದರು. ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾದಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪೊಲೀಸ ವರಿಷ್ಟಾಧಿಕಾರಿ ರೋಹನ್ ಜಗದೀಶ್ ಇದ್ದರು.

# ಗುಣಮಟ್ಟದ ಹೆಸರುಕಾಳು ಹುಟ್ಟುವಳಿ ಖರೀದಿಗೆ ಬೆಂಬಲ ಬೆಲೆ : ಡಿ.ಸಿ

❑ ಸ್ನೇಹಜೀವಿ ನ್ಯೂಸ್


ಗದಗ, ಸೆ. 29 : 2025-26 ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತ-ರಿಂದ ಎಫ್.ಎ.ಕ್ಯೂ ಗುಣಮಟ್ಟದ ಹೆಸರುಕಾಳು ಹುಟ್ಟುವಳಿಯನ್ನು ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾಭವನದಲ್ಲಿ ಶುಕ್ರವಾರ 2025-26 ನೇ ಸಾಲಿನ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಹೆಸರು ಹುಟ್ಟುವಳಿ ಖರೀದಿಸುವ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಪ್ರತಿ ರೈತರಿಂದ ಪ್ರತಿ ಎಕರೆಗೆ 03 ಕ್ವಿಂಟಲ್‌ನಂತೆ ಗರಿಷ್ಟ 15 ಕ್ವಿಂಟಲ್ ಎಫ್.ಎ.ಕ್ಯೂ ಗುಣಮಟ್ಟದ ಹೆಸರು ಖರೀದಿಸಲು ಹಾಗೂ ಹೆಸರು ಖರೀದಿ ಕೇಂದ್ರಗಳಲ್ಲಿ ರೈತರ ಹೆಸರಿನಲ್ಲಿ ವರ್ತಕರು ತರುವ ಹೆಸರುಕಾಳು ಉತ್ಪನ್ನವನ್ನು ಖರೀದಿಸಿದಂತೆ ಹಾಗೂ ಖರೀದಿ ಸಂಸ್ಥೆಗಳು ಯಾವುದೇ ರೀತಿಯ ದುರುಪಯೋಗವಾಗದಂತೆ ಎಲ್ಲ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕೆಂದು ಸೂಚಿಸಿದರು.

ಸರ್ಕಾರದ ಮಾನದಂಡಗಳನ್ವಯ ಎಫ್.ಎ.ಕ್ಯೂ ಗುಣಮಟ್ಟವನ್ನು ದೃಢೀಕರಿಸಲು ಕ್ರಮ ವಹಿಸಬೇಕು. ಹೆಸರು ಕಾಳಿನ ಎಫ್.ಎ.ಕ್ಯೂ ಪ್ರಕ್ರಿಯೆಯಲ್ಲಿ ಎಫ್.ಎ.ಕ್ಯೂ ಗುಣಮಟ್ಟ ಪರಿಶೀಲನೆಗಾಗಿ ಲಭ್ಯವಿರುವ ಅಧಿಕಾರಿ / ಸಿಬ್ಬಂದಿಗಳನ್ನು ಬಳಸಿಕೊಳ್ಳುವುದು. ತರಬೇತಿ ಅವಶ್ಯವಿದ್ದಲ್ಲಿ ಅಂತಹ ಸಿಬ್ಬಂದಿಗಳಿಗೆ ಎಫ್.ಎ.ಕ್ಯೂ ಗ್ರೇಡಿಂಗ್ ತರಬೇತಿ ನೀಡಲು ಖರೀದಿ ಸಂಸ್ಥೆಗಳು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರು ಮಾತನಾಡಿ ಎಫ್.ಎ.ಕ್ಯೂ ಗುಣಮಟ್ಟದ ಹೆಸರು ಉತ್ಪನ್ನವನ್ನು ಪ್ರತಿ ಕ್ವಿಂಟಾಲ್‌ಗೆ ರೂ. 8768 ರಂತೆ ನಿಗದಿಪಡಿಸಲಾಗಿದೆ. ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ಸದರಿ ಆದೇಶ ಹೊರಡಿಸಿದ ದಿನಾಂಕದಿಂದ ರೈತರ ನೋಂದಣಿ ಕಾಲಾವಧಿಯನ್ನು 80 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರಗೆ ನಿಗದಿಪಡಿಸಲಾಗಿದೆ. ನೋಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆಯನ್ನು ಸಹ ಪ್ರಾರಂಭಿಸಿ ರಾಜ್ಯದಲ್ಲಿ ಮಾರ್ಕಫೆಡ್ ಸಂಸ್ಥೆಯ ಮೂಲಕ ಖರೀದಿಸಲು ಆದೇಶಿಸಲಾಗಿದೆ ಎಂದು ತಿಳಿಸಿದರು.



ಹೆಸರುಕಾಳು ಖರೀದಿ ಕೇಂದ್ರಗಳ ಸ್ಥಳ ನಿಗದಿ : ಸರ್ಕಾರದ ಆದೇಶದನ್ವಯ ರಾಜ್ಯದಲ್ಲಿ ನಾಫೆಡ್ ಹಾಗೂ ಎನ್.ಸಿ.ಸಿ.ಎಫ್. (ಎನ್‌ಸಿಸಿ-ಎಫ್) ಸಂಸ್ಥೆಯನ್ನು ಕೇಂದ್ರ ಸರ್ಕಾರದ ಖರೀದಿ ಸಂಸ್ಥೆಯನ್ನಾಗಿ ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ನಿಯಮಿತ ಬೆಂಗಳೂರು ಮತ್ತು ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿ ನಿಯಮಿತ ಕಲಬುರಗಿ ಸಂಸ್ಥೆಗಳನ್ನು ರಾಜ್ಯದ ವತಿಯಿಂದ ಖರೀದಿ ಸಂಸ್ಥೆಯನ್ನಾಗಿ ಗುರುತಿಸಲಾಗಿದೆ. ಗದಗ ಜಿಲ್ಲೆಯಲ್ಲಿ ಗದಗ ಹಾಗೂ ನರಗುಂದ ಮಾರ್ಕಫೆಡ್ ಸಂಸ್ಥೆಯ ಶಾಖೆಗಳಿದ್ದು ಜಿಲ್ಲೆಯ ತಾಲೂಕುಗಳ ವ್ಯಾಪ್ತಿಯಲ್ಲಿ ಗ್ರಾಮೀಣ ಭಾಗದ ರೈತರಿಗೆ ಅನುಕೂಲವಾಗುವಂತೆ ಎನ್.ಸಿ.ಸಿ.ಎಫ್. (ಎನ್‌ಸಿಸಿಎಫ್) ಮಾರ್ಗಸೂಚಿಯನ್ವಯ ಹಾಗೂ ತಾಂತ್ರಿಕ ಮತ್ತು ವೈಜ್ಞಾನಿಕ ಸೌಲಭ್ಯದಿಂದ ಕೂಡಿರುವ ಸದೃಢ PACS/OGCS/TAPCMS/FPO/Agricultural, Prodece Co operative Marketing Processing Societies ಸಂಸ್ಥೆಗಳ ಮುಖಾಂತರ ಒಡಂಬಡಿಕೆ ಮಾಡಿಕೊಂಡು ಕೆಳಕಾಣಿಸಿದ ಸ್ಥಳಗಳಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲು ಎರಡು ಖರೀದಿ ಏಜೆನ್ಸಿಯ ಶಾಖೆಗಳಿಗೆ ಸೂಚಿಸಲಾಯಿತು.

ಗದಗ ತಾಲೂಕು (20) : PACS - PACS : ಮುಳಗುಂದ, ಬಳಗಾನೂರ, ಹರ್ಲಾಪುರ, ಶಿರೋಳ, ಕೋಟುಮಚಗಿ-1, ಹೊಂಬಳ, ನೀರಲಗಿ, ಕೋಟುಮಚಗಿ-2, ಸೊರಟೂರ, ಕದಡಿ, ಲಿಂಗದಾಳ, ಕಣಗಿನಹಾಳ, ಕುರ್ತಕೋಟಿ, ಬಿಂಕದಕಟ್ಟಿ, ನಾಗಾವಿ, ನಾಗಾವಿ ನಂ.2 . FPO -(ಎಫ್.ಪಿ.ಓ): ಪ್ರಭುಸ್ವಾಮಿ ಹೊಂಬಳ, ಶ್ರಮಜೀವಿ ಹಿರೇಹಂದಿಗೋಳ, ಟಿಎಪಿಸಿ-ಎಂಎಸ್ ಗದಗ, ಗದಗ ಕೋ ಆಪ್ ಕಾಟನ್ ಸೇಲ್ ಸೊಸೈಟಿ, ಗದಗ. ಶಿರಹಟ್ಟಿ (03) : ಪಿಎಸಿಎಸ್ ಶಿರಹಟ್ಟಿ, ಟಿಎಪಿಸಿಎಂಎಸ್ ಶಿರಹಟ್ಟಿ, ಎಫ್.ಪಿ.ಓ ಬೆಳ್ಳಟ್ಟಿ. ಲಕ್ಷ್ಮೇಶ್ವರ (03) : ಪಿಎಸಿಎಸ್ ಯಳವತ್ತಿ, ಪಿಎಸಿಎಸ್ ಅಡರಕಟ್ಟಿ, ಟಿಎಪಿಸಿಎಂಎಸ್ ಲಕ್ಷ್ಮೇಶ್ವರ. ಮುಂಡರಗಿ (05) : ಪಿಎಸಿಎಸ್ ಆಲೂರ, ಪೇಠಾಲೂರ, ಬರದೂರ , ಶಿರೂರ ಟಿಎಪಿಸಿ-ಎಸ್ ಮುಂಡರಗಿ. ನರಗುಂದ (09) : ಪಿಎಸಿಎಸ್ ಚಿಕ್ಕನರಗುಂದ, ಸುರಕೋಡ, ಸಂಕದಾಳ, ಶಿರೋಳ, ಕೊಣ್ಣೂರ, ಹಿರೇಕೊಪ್ಪ, ಜಗಾಪೂರ, ಖಾನಾಪೂರ, ಗಂಗಾಪೂರ. ಟಿಎಪಿಸಿಎಂಎಸ್- ನರಗುಂದ.

ರೋಣ (15) : ಪಿಎಸಿಎಸ್ : ಹೊಸಳ್ಳಿ, ಮಲ್ಲಾಪೂರ, ರೋಣ -1, ರೋಣ-2, ಜಕ್ಕಲಿ, ಯಾವಗಲ್, ಕೌಜಗೇರಿ, ಬೆಳವಣಕಿ, ಸವಡಿ, ನಿಡಗುಂದಿ, ಅಬ್ಬಿಗೇರಿ, ಹೊಳೆ ಆಲೂರ, ಯಾ.ಸ. ಹಡಗಲಿ. ಟಿಎಪಿಸಿಎಂಎಸ್ ರೋಣ, ಎಫ್.ಪಿ.ಓ ಸವಡಿ. ಗಜೇಂದ್ರಗಡ (02) :ಟಿಎಪಿಸಿಎಂಎಸ್ ನರಗಲ್, ಟಿಎಪಿಸಿಎಂಎಸ್ ಗಜೇಂದ್ರಗಡ.

ಸಭೆಯಲ್ಲಿ ಕೃಷಿ ಇಲಾಖೆ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ಕಾನೂನು ಮಾಪನ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾ-ರಿಗಳು ಹಾಜರಿದ್ದರು.

# ಶಕ್ತಿದೇವಿಯ ಆರಾಧನೆ ಮೂಲಕ ದೈವೀಶಕ್ತಿ ಪಡೆದು ಪಾವನರಾಗಿ

❑ ಸ್ನೇಹಜೀವಿ ನ್ಯೂಸ್

ಗದಗ, ಸೆ. 29 : ಪರಂಪರೆಯಂತೆ ನವರಾತ್ರಿಯ ಸಂದರ್ಭದಲ್ಲಿ ಶಕ್ತಿದೇವಿಯ ಆರಾಧನೆ ಮಾಡುವ ಮೂಲಕ ದೈವೀಶಕ್ತಿಯನ್ನು ಪಡೆದು ಪಾವನರಾಗಬೇಕು ಎಂದು ನರಗುಂದ ದೊರೆಸ್ವಾಮಿಮಠ, ಹಾಗೂ ಶಿರೋಳ ತೋಂಟದಾರ್ಯ ಶಾಖಾಮಠದ ಶ್ರೀಶಾಂತಲಿಂಗ ಮಹಾಸ್ವಾಮಿಗಳು ಹೇಳಿದರು.

ನಗರದ ಮುಳಗುಂದನಾಕಾ ಬಳಿಯ ಶ್ರೀಅಡವೀಂದ್ರಸ್ವಾಮಿ ಮಠದಲ್ಲಿ ದಸರಾ ಮಹೋತ್ಸವ ಮತ್ತು ಶ್ರೀದೇವಿ ಪುರಾಣ ಪ್ರವಚನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಅಡವೀಂದ್ರಸ್ವಾಮಿ ಮಠದಲ್ಲಿ ಕಳೆದ ಹಲವಾರು ವರ್ಷಗಳಿಂದ ನವರಾತ್ರಿಯ ಸಂದರ್ಭದಲ್ಲಿ ಶ್ರೀಅನ್ನಪೂರ್ಣೇಶ್ವರಿಯ ವಿಶೇಷ ಪೂಜೆಯೊಂದಿಗೆ ಶಕ್ತಿದೇವಿಯ ಆರಾಧನೆ ಮಾಡಲಾಗುತ್ತಿದ್ದು, ಪ್ರಸಕ್ತ ವರ್ಷ ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ಸದಾಶಿವಯ್ಯ ಮದರಿಮಠ ಅವರ ತಂಡದ ನೇತೃತ್ವದಲ್ಲಿ ಅದ್ದೂರಿಯಿಂದ ಆಚರಣೆ ಮಾಡುತ್ತಿರುವುದು ಶ್ಲಾಘನೀಯ ಎಂದು ಶ್ರೀಗಳು ಹೇಳಿದರು.

**ಅಡವಿಂದ್ರಸ್ವಾಮಿ ಮಠದ ದಸರಾ ಮಹೋತ್ಸವ-ಪ್ರಶಸ್ತಿ ಪ್ರಧಾನ**

ಸಮ್ಮುಖ ವಹಿಸಿದ್ದ ಶ್ರೀಅಡವೀಂದ್ರ ಸ್ವಾಮಿಮಠದ ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮೀಜಿ ಸಮ್ಮುಖದಲ್ಲಿ ಲಿಂ.ಶ್ರೀಶಿವಮೂರ್ತೆಪ್ಪ ಬಳಿಗಾರ ಅವರ




ಭಾವಚಿತ್ರವನ್ನು ಅನಾವರಣಗೊಳಿಸಲಾಯಿತು. ಶ್ರೀದೇವಿಗೆ ಹಾಗೂ ಮುತ್ತೈದೆಯರಿಗೆ ಅರಿಷಿಣ, ಕುಂಕುಮ, ಬಳೆ ಸೇವೆ ನೆರವೇರಿಸಲಾಯಿತು.

ಗಣ್ಯ ಉದ್ದಿಮೆದಾರರಾದ ವಿನಾಯಕ ತೇಜಪ್ಪಗೌಡ ಪಾಟೀಲ ಹಾಗೂ ಬಸವರಾಜ ಶಿವಪ್ಪ ಅಂಗಡಿ ಅವರಿಗೆ ಶ್ರೇಷ್ಠ ಉದ್ಯಮಶ್ರೀ ಪ್ರಶಸ್ತಿ, ಕೆಇಬಿ ನಿವೃತ್ತ ಅಧಿಕಾರಿ ಜಿ.ಎಂ. ಯಾನಮಶೆಟ್ಟಿ ಅವರಿಗೆ ಸಮಾಜಸೇವಾ ರತ್ನ ಪ್ರಶಸ್ತಿಯನ್ನು ಪ್ರಧಾನ ಮಾಡಿ, ಗೌರವಿಸಲಾಯಿತು. ತೆರಿಗೆ ಸಲಹೆಗಾರರಾದ ಶ್ರೀಶೈಲ ಬಳಿಗಾರ ಅವರಿಗೆ ಗುರುಶ್ರೀ ರಕ್ಷೆ ಸನ್ಮಾನಿಸಲಾಯಿತು.

ಶ್ರೀಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿಯ ಗೌರವಾಧ್ಯಕ್ಷ ಎಸ್.ಪಿ.ಸಂಶಿಮಠ, ಅಧ್ಯಕ್ಷ ಸದಾಶಿವಯ್ಯ ಮದರಿಮಠ, ಪ್ರಧಾನ ಕಾರ್ಯದರ್ಶಿ ಶರಣಬಸಪ್ಪ ಗುಡಿಮನಿ, ಮಹಿಳಾ ಸಮಿತಿ ಅಧ್ಯಕ್ಷೆ ಸುವರ್ಣಾ ಮದರಿಮಠ ಮುಂತಾದ ಗಣ್ಯರು ವೇದಿಕೆಯಲ್ಲಿದ್ದರು.

ಡಾ.ರಾಜಗುರು ಗುರುಸ್ವಾಮಿ ಕಲಕೇರಿ ಅವರಿಂದ ಪುರಾಣ ಪ್ರವಚನ ನಡೆಯಿತು. ಚನ್ನಬಸಯ್ಯ ಶಾಸ್ತ್ರಿಗಳು ಹೇಮಗಿರಿಮಠ ಪುರಾಣ ಪಠಿಸಿದರು. ಪಕ್ರುಸಾಬ ಮುಲ್ಲಾ, ಜಗನ್ನಾಥ ಕಲಬುರಗಿ, ಶರಣಕುಮಾರ ಗುತ್ತರಗಿ, ಎಸ್.ಬಿ. ಭಜಂತ್ರಿ ಸಂಗೀತ ಸೇವೆ ನೀಡಿದರು.

ಶರಣಯ್ಯಸ್ವಾಮಿ ಶಿವಪ್ಪಯ್ಯನಮಠ, ವೀರೇಶ್ವರ ಹೊಸಳ್ಳಿಮಠ, ಗೀತಾ ಎಂ. ಹೂಗಾರ, ಸುಷ್ಮಾ ಖಂಡಪ್ಪಗೌಡ್ರ, ಕೋಶಾಧ್ಯಕ್ಷರಾದ ಅಶ್ವಿನಿ ನೀಲಗುಂದ, ವಿ.ಎಚ್.ದೇಸಾಯಿಗೌಡ್ರ ಮತ್ತಿತರ ಗಣ್ಯರು ಉಪಸ್ಥಿತರಿದ್ದರು. ಭೂಮಿಕಾ ಹೊಸಳ್ಳಿಮಠ ನೃತ್ಯ ಪ್ರದರ್ಶಿಸಿದರು. ವಿರುಪಾಕ್ಷಯ್ಯ ಹೊಸಳ್ಳಿಮಠ ಕೊಳಲುವಾದನ ಪ್ರಸ್ತುತಪಡಿಸಿದರು.

ವಿಜಯಲಕ್ಷ್ಮೀ ಹೊಸಳ್ಳಿಮಠ ಸ್ವಾಗತಿಸಿದರು. ವಿ.ಎಂ.ಕುಂದ್ರಾಳಹಿರೇಮಠ ನಿರೂಪಿಸಿದರು. ಶ್ರೀಧರ ಧರ್ಮಾಯತ ವಂದಿಸಿದರು.

# ಸಂಸ್ಕೃತಿ ನಮ್ಮನ್ನು ಗಟ್ಟಿಗೊಳಿಸುತ್ತದೆ : ರಾಮಣ್ಣ




❑ ಸ್ನೇಹಜೀವಿ ನ್ಯೂಸ್

ಗದಗ, ಸೆ. 29 : ಇಡಿ ಪ್ರಪಂಚ ಒಂದು ಮನೆ, ಭೂಮಿಯ ಮೇಲೆ ಇರುವರೆಲ್ಲರೂ ಭೂತಾಯಿ ಮಕ್ಕಳು ಇದು ಜಗತ್ತಿಗೆ ಹೇಳುವದು ಅಲ್ಲ ನಾವುಗಳು ಬದುಕಿ ತೋರಿಸುವುದು ಆಗಿದೆ ಎಂದು ಆರ್. ರಾಮಣ್ಣ ಅವರು ಹೇಳಿದರು.

ನಗರದ ಎಪಿಎಂಸಿ ಆವರಣದಲ್ಲಿರುವ ಶ್ರೀ ರಾಮಕೃಷ್ಣ ವಿವೇಕಾನಂದ ಆಶ್ರಮದಲ್ಲಿ ಶರನ್ನವರಾತ್ರಿ ಉತ್ಸವ-2025 ದ ನಾಲ್ಕನೇಯ ದಿನದ ಕಾರ್ಯಕ್ರಮದ ಸಾನಿಧ್ಯವಹಿಸಿ ಮಾತನಾಡಿ, ಭಾರತ ಬರಿ ಭೂ ಭಾಗವಲ್ಲ, ಅದು ನಮ್ಮ ಮಾತೃಭೂಮಿ. ಈ ಮಾತೃಭೂಮಿಗಾಗಿ ನಾವು ಪ್ರಾಣಾರ್ಪಣೆಗಾಗಿ ಸಿದ್ದರಿರಬೇಕು. ನಂಬಿಕೆಯನ್ನು ನಡುವಳಿಕೆಯಲ್ಲಿ ಇಳಿಸಿದಾಗ ಸಂಸ್ಕೃತಿ ನಿರ್ಮಾಣವಾಗುತ್ತದೆ. ಅದೇ ಸಂಸ್ಕೃತಿ ನಮ್ಮನ್ನು ಗಟ್ಟಿಗೊಳಿಸುತ್ತದೆ. ಈ ಹಿಂದೆ ನಾವು ರಾಜಕೀಯವಾಗಿ ದೇಶವನ್ನು ಪರಕೀಯರಿಗೆ ಒಪ್ಪಿಸಿದ್ದರೂ ಮೂಲ ದೇವಸ್ಥಾನ, ಸಂಸ್ಕಾರವನ್ನು ನಾವು ಬಿಟ್ಟುಕೊಟ್ಟಿರಲಿಲ್ಲ ಇದೇ ಕಾರಣದಿಂದಾಗಿ ಭಾರತ ಭಾರತವಾಗಿ ಉಳಿದಿದೆ.

ನಮ್ಮ ಎಲ್ಲ ಜಾತಿಗಳ ಕುಟುಂಬಗಳು ಒಂದೆ ಆಗಿದೆ. ದೇವರಿಲ್ಲದ ಮನೆ ಯಾವ ಹಿಂದುಗಳಲ್ಲಿಯೂ ಇಲ್ಲ. ಭಾರತ ಕುಟುಂಬದ ಹಿರಿಮೆ ಮತ್ತು ಕರ್ತವ್ಯಕ್ಕೆ ಒತ್ತುಕೊಟ್ಟಿದೆ. ಎಲ್ಲರೂ ಎಲ್ಲರ ನೆರವಿಗೆ ಬಂದಾಗ ಎಲ್ಲರೂ ಸುರಕ್ಷಿತವಾಗಿರುತ್ತಾರೆ ಎಂದು ಹೇಳಿದರು.

ನಮ್ಮ ಎಲ್ಲ ದೇವರು ಗೃಹಸ್ಥರಾಗಿದ್ದಾರೆ. ಅವರಿಗೆ ಮಕ್ಕಳು ಇದ್ದಾರೆ. ಅದರಂತೆ ದೇವರ ಕುಟುಂಬದ ಕಲ್ಪನೆ ಮಾಡಿಕೊಂಡು ನಾವುಗಳು ಬದುಕಬೇಕು. ಕುಟುಂಬ ಸಂಸ್ಕೃತಿಯನ್ನು ಜಗತ್ತಿಗೆ ತೋರಿಸಿರುವದೇ ಭಾರತ ದೇಶ. ನಮ್ಮ ಮನೆ ದೇವಾಲಯ, ವಿದ್ಯಾಲಯವಾಗಬೇಕು. ನಮ್ಮ ಮಾತೃಬಾಷೆ ನಮಗೆ ಸಂಸ್ಕೃತಿಯನ್ನು ಕಲಿಸಿಕೊಡುತ್ತದೆ. ಹಿರಿಯರು ಕಲಿಸಿದ ಸಂಸ್ಕೃತಿಯನ್ನು ಮಕ್ಕಳಿಗೆ ಕಲಿಸಿಕೊಡಬೇಕಾಗಿದೆ. ದೇವಸ್ಥಾನಗಳಿಗೆ ಹೋಗುವದು, ಹಿಂದೂ ಹಬ್ಬಗಳನ್ನು ಆಚ-ರಿಸುವದು ನಮ್ಮ ಪರಂಪರೆ ಆಗಿದೆ. ಅದನ್ನು ಮುಂದುವರೆಸಿಕೊಂಡು ಹೋಗಬೇಕು ಎಂದು ಆರ್. ರಾಮಣ್ಣ ಅವರು ಹೇಳಿದರು.

ಶ್ರೀರಾಮಕೃಷ್ಣ ಆಶ್ರಮದ ಪೂಜ್ಯಶ್ರೀ ಸ್ವಾಮಿ ಜಗನ್ನಾಥಾನಂದ ಅವರು ಸಾನಿಧ್ಯ ವಹಿಸಿದ್ದರು. ನಂತರ ಭಜನೆ, ಪ್ರಸಾದಸೇವೆ ಜರುಗಿತು.

# ಭೈರಪ್ಪನವರ ಚಿಂತನೆಗಳು ಸರ್ವಕಾಲಕ್ಕೂ ಪ್ರಸ್ತುತ

❑ ಸ್ನೇಹಜೀವಿ ನ್ಯೂಸ್



ಗದಗ, ಸೆ. 29 : ಭಾರತೀಯ ಸಂಸ್ಕೃತಿ, ಪರಂಪರೆ, ಇತಿಹಾಸ, ಸಮಾಜ, ಸಂಗೀತ, ಮಾನವೀಯ ಜೀವನ ಮೌಲ್ಯಗಳನ್ನು ಕಾದಂಬರಿ ಸಾಹಿತ್ಯದ ಮೂಲಕ ಮನಮುಟ್ಟುವಂತೆ ಚಿತ್ರಿಸಿ ಭಾರತೀಯ ಕಾದಂಬರಿ ಸಾಹಿತ್ಯ ಕ್ಷೇತ್ರವನ್ನು ಶ್ರೀಮಂತವಾಗಿಸಿರುವ ಡಾ. ಎಸ್.ಎಲ್. ಭೈರಪ್ಪನವರ ಚಿಂತನೆಗಳು ಸರ್ವಕಾಲಕ್ಕೂ ಪ್ರಸ್ತುತವೆಂದು ಪ್ರೊ. ಸುಧಾ ಕೌಜಗೇರಿ ಹೇಳಿದರು. ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ವಿಭಾಗವು ಐಕ್ಯುಎಸಿ ಘಟಕದ ಅಡಿಯಲ್ಲಿ ಹಮ್ಮಿಕೊಂಡಿದ್ದ 'ಡಾ. ಎಸ್.ಎಲ್.ಭೈರಪ್ಪ ನುಡಿನಮನ' ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತ ವಿಶಿಷ್ಟ ಶೈಲಿಯ ಬರಹದಿಂದ ಅಪಾರ ಸಂಖ್ಯೆಯ ಓದುಗರನ್ನು ಸೃಷ್ಟಿಸಿಕೊಂಡಿರುವ ಭೈರಪ್ಪನವರು ಜನಪ್ರಿಯತೆ ಮತ್ತು ಚಿಂತನಶೀಲತೆ ಕಾಯ್ದುಕೊಂಡ ಕನ್ನಡನಾಡಿನ ಅಪೂರ್ವ ಲೇಖಕರಾಗಿದ್ದು, ಅವರ ಬರಹ ಮತ್ತು ವ್ಯಕ್ತಿತ್ವ ಯುವಕರಿಗೆ ದಾರಿದೀಪವೆಂದು ಹೇಳಿದರು.

ಇತಿಹಾಸ ವಿಭಾಗದ ಮುಖ್ಯಸ್ಥ ಮತ್ತು ಎನ್.ಎಸ್.ಎಸ್. ಘಟಕದ ಸಂಯೋಜಕ ಪ್ರೊ. ಅಪ್ಪಣ್ಣ ಹಂಜೆ 'ಭೈರಪ್ಪನವರ ಕಾದಂಬರಿಗಳಲ್ಲಿ ಐತಿಹಾಸಿಕ ಚಿಂತನೆಗಳು', ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಉಲ್ಲಾಸ ಶೆಟ್ಟಿ 'ಭೈರಪ್ಪನವರ ಕಾದಂಬರಿಗಳಲ್ಲಿ ವೈಜ್ಞಾನಿಕ ವಿಚಾರಗಳು', ಪ್ರೊ. ಲಕ್ಷ್ಮಣ ಮುಳಗುಂದ 'ಭೈರಪ್ಪನವರ ಕಾದಂಬರಿಗಳಲ್ಲಿ ದೈನಂದಿನ ವ್ಯವಹಾರಿಕ ಸಂಗತಿಗಳು', ಭೌತಶಾಸ್ತ್ರ ವಿಭಾಗದ ಮುಖ್ಯಸ್ಥ ಮತ್ತು ಐಕ್ಯುಎಸಿ ಘಟಕದ ಸಂಯೋಜಕ ಡಾ. ಜಿತೇಂದ್ರ ಜಹಾಗೀರದಾರ 'ಭೈರಪ್ಪನವರ ಕಾದಂಬರಿಗಳಲ್ಲಿ ತಾತ್ವಿಕ ಚಿಂತನೆಗಳು', ಕನ್ನಡ ವಿಭಾಗದ ಮುಖ್ಯಸ್ಥ ಮತ್ತು ಸಾಂಸ್ಕೃತಿಕ ವಿಭಾಗದ ಸಂಯೋಜಕ ರಮೇಶ ಹುಲಕುಂದ 'ಭೈರಪ್ಪನವರ ಕಾದಂಬರಿಗಳಲ್ಲಿ ಮಾನವೀಯ ಜೀವನ ಮೌಲ್ಯಗಳು', ಕನ್ನಡ ಪ್ರಾಧ್ಯಾಪಕ ಭೀಮೇಶ 'ಭೈರಪ್ಪನವರ ಕಾದಂಬರಿಗಳಲ್ಲಿ ಗ್ರಾಮೀಣ ಬದುಕು', ರಾಜ್ಯಶಾಸ್ತ್ರ ಪ್ರಾಧ್ಯಾಪಕ ಸುಭಾಸ ಹರಿಹರ 'ಭೈರಪ್ಪನವರ ಕಾದಂಬರಿಗಳಲ್ಲಿ ರಾಜಕೀಯ ವಿಚಾರಗಳು', ಇಂಗ್ಲೀಷ ವಿಭಾಗದ ಮುಖ್ಯಸ್ಥೆ ಮಹಾನಂದಾ ಹಿರೇಮಠ 'ಆಂಗ್ಲ ಭಾಷೆಗೆ ಅನುವಾದಿತ ಭೈರಪ್ಪನವರ ಕಾದಂಬರಿಗಳ ವೈಶಿಷ್ಟ್ಯತೆ', ಇಂಗ್ಲೀಷ ಪ್ರಾಧ್ಯಾಪಕಿ ಸಾವಿತ್ರಿ ಟಿ. 'ಭೈರಪ್ಪನವರ ಕಾದಂಬರಿಗಳ ಜನಪ್ರಿಯತೆ ಮತ್ತು ಪ್ರಸ್ತುತತೆ' ಕುರಿತು ಮಾತನಾಡುತ್ತ ನುಡಿನಮನ ಸಲ್ಲಿಸಿದರು. ವಿದ್ಯಾರ್ಥಿಗಳು ಕಾರ್ಯಕ್ರಮ ನಡೆಸಿಕೊಟ್ಟರು.

# ಮಾನವೀಯ ಮೌಲ್ಯಗಳನ್ನು ಬೆಳೆಸಿ : ಎಸ್ ಎಸ್ ಪಟ್ಟಣ್ ಶೆಟ್ಟರ್



❑ ಸ್ನೇಹಜೀವಿ ನ್ಯೂಸ್

ಕಲ್ಬುರ್ಗಿ:ಸೆ.29: ಮಾನವೀಯ ಮೌಲ್ಯಗಳನ್ನು ಬೆಳೆಸಬೇಕು, ಮಾನವೀಯ ಮೌಲ್ಯಗಳನ್ನು ಬೆಳೆಸುವಲ್ಲಿ ಶಿಕ್ಷಕರ ಪಾತ್ರ ಅಮೂಲ್ಯವಾದದ್ದು ಎಂದು ನಾಡಿನ ಶ್ರೇಷ್ಠ ಶಿಕ್ಷಣ ತಜ್ಞರು, ಸಮಾಜ ಸೇವಾ ಭೂಷಣ ಪ್ರಶಸ್ತಿ ಪುರಸ್ಕೃತರಾದ ಹಾಗೂ ರಾಜ್ಯದ ಪ್ರತಿಷ್ಠಿತ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿಗಳಾದ ಪ್ರೊ .ಎಸ್ ಎಸ್ ಪಟ್ಟಣ್ ಶೆಟ್ಟರ್ ಹೇಳಿದರು.

ಡಿ. ಸಿ. ಪಾವಟೆ ಶಿಕ್ಷಣ ಮಹಾವಿದ್ಯಾಲಯದಲ್ಲಿ 2023–25 ಸಾಲಿನ ಪ್ರಶಿಕ್ಷಣಾರ್ಥಿಗಳ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ ದೀಪದಾನ ಸಮಾರಂಭವನ್ನು ಉದ್ಘಾಟಿಸಿ, ಮಾತನಾಡಿದ ಅವರು

ಮಕ್ಕಳ ಶೈಕ್ಷಣಿಕ ಮತ್ತು ಬೌದ್ಧಿಕ ಬೆಳವಣಿಗೆಯಲ್ಲಿ ಶಿಕ್ಷಕರ ಪಾತ್ರ ಬಹು ಮಹತ್ವದ್ದು. ಪಾಠಭ್ಯಾಸದ ಜೊತೆಯಲ್ಲಿ ಉತ್ತಮ ಸಂಸ್ಕಾರ ಮಾನವೀಯ ಮೌಲ್ಯಗಳನ್ನು ಕಲಿಸಿ ಆದರ್ಶಮಯವಾಗಿ ಬೆಳೆಯಲು ಪ್ರೋತ್ಸಾಹಿಸಿ, ದೇಶದ ಪ್ರಗತಿ ಹಾಗೂ ಜ್ಞಾನವಂತರನ್ನು ತಯಾರು ಮಾಡುವವರು ಶಿಕ್ಷಕರು ಎಂದು ಹೇಳಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ ಕೆ. ಎಲ್. ಇ ಕಲಾ ಮತ್ತು ವಾಣಿಜ್ಯ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಎ. ಕೆ. ಮಠ ರವರು "ವಿದ್ಯಾರ್ಥಿಗಳು ಅತ್ಯುನ್ನತ ಸ್ಥಾನವನ್ನು ಪಡೆಯಬೇಕಾದರೆ ಮಾನಸಿಕವಾಗಿ ಸದೃಢರಾಗಿರಬೇಕು" ಎಂದು ಪ್ರಶಿಕ್ಷಣಾರ್ಥಿಗಳನ್ನುದ್ದೇಶಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಉಪಸ್ಥಿತರಿರುವ ಪ್ರಾಚಾರ್ಯರಾದ ಎಸ್. ಪಿ. ಗೌಳಿ ರವರು "ಉತ್ತಮ ಸಮಾಜದ ನಿರ್ಮಾಣದಲ್ಲಿ ಶಿಕ್ಷಕರ ಜವಾಬ್ದಾರಿಗಳ" ಕುರಿತು ಮಾತನಾಡಿದರು. ಕಾರ್ಯಕ್ರಮದಲ್ಲಿ 2023–24 ನೇ ಸಾಲಿನಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಪ್ರಶಿಕ್ಷಣಾರ್ಥಿಗಳಾದ ಕು. ಭಾರತಿ ಕೋಳೂರ ಹಾಗೂ ಕು. ಕಾವ್ಯಾ ಮೊರಬರಡ್ಡಿ ರವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಎಲ್ಲ ಬೋಧಕ ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ಪ್ರಥಮ ಮತ್ತು ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳು ಹಾಗೂ ಬಸವಯೋಗ ಮಹಾವಿದ್ಯಾಲಯದ ಪ್ರಾಚಾರ್ಯರಾದ ಕೆ. ಎಸ್. ಪಲ್ಲೇದ ರವರು ಬಸವೇಶ್ವರ ಕನ್ನಡ ಮಾಧ್ಯಮ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಕೆ. ವಿ. ಕೋರಡ್ಡಿರವರು ಬಸವೇಶ್ವರ

ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ಮುಖ್ಯೋಪಾಧ್ಯಾಯರಾದ ಎಂ. ಕೆ. ಬಂಡಿಹಾಳರವರು, ಬಸವೇಶ್ವರ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರಾದ ಎಸ್. ಆರ್. ಗಿಡ್ಡ ಕೆಂಚಣ್ಣನವರ ಉಪಸ್ಥಿತರಿದ್ದರು. ಕಾರ್ಯಕ್ರಮದ ಪ್ರಾರ್ಥನೆಯನ್ನು ಕು. ವಿದ್ಯಾ ಹಾಗೂ ಗೌರಿ ನೆರವೇರಿಸಿದರು. ಸ್ವಾಗತ ಹಾಗೂ ಪುಷ್ಪಾರ್ಪಣೆಯನ್ನು ಕು. ರೇಖಾ ರಾಮವಾಡಗಿ, ಅತಿಥಿಗಳ ಪರಿಚಯವನ್ನು ಕು. ಅಂಜಲಿ ಬೇಲೇರಿ, ಪ್ರಾಸ್ತಾವಿಕ ನುಡಿಗಳನ್ನು ಡಾ. ಜಿ. ಎಸ್. ಹಸಬಿ ನೆರವೇರಿಸಿದರು. ವರದಿ ವಾಚನವನ್ನು ಶ್ರೀಮತಿ. ಎಮ್. ವಾಯ್.ಸೈದಾಪೂರ ಹಾಗೂ ಬಹುಮಾನ ವಿತರಣೆಯನ್ನು ಪಿ. ವಿ. ಮುರಗಿ ರವರು ನಡೆಸಿಕೊಟ್ಟರು ಕಾರ್ಯಕ್ರಮದ ನಿರೂಪಣೆಯನ್ನು ಕು. ದರ್ಶನ ಕೊಂಡಿಕೊಪ್ಪ ಮತ್ತು ಕು. ಕಾವ್ಯಾಶ್ರೀ ಗಾಣಿಗೇರ ನೆರವೇರಿಸಿದರು ಕು. ಅಶ್ವಿನಿ ಪೂಜಾರ ವಂದಿಸಿದರು.

# "ನನಗೆ ಪ್ರಧಾನಿ ಗೊತ್ತು, ಪ್ರಧಾನಿ ಕಚೇರಿಯ ನೇರ ಸಂಪರ್ಕವಿದೆ": ತನಿಖೆ ವೇಳೆ ಪೊಲೀಸರಿಗೇ ಬೆದರಿಕೆ ಹಾಕಿದ ಸ್ವಾಮಿ!



❑ ಸ್ನೇಹಜೀವಿ ನ್ಯೂಸ್

ನವದೆಹಲಿ: 17 ವಿದ್ಯಾರ್ಥಿನಿಯರಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪ ಎದುರಿಸುತ್ತಿರುವ ಸ್ವಯಂಘೋಷಿತ ದೇವಮಾನವ ಸ್ವಾಮಿ ಚೈತನ್ಯಾ ನಂದ ಸರಸ್ವತಿ ಪೊಲೀಸರಿಗೇ ಬೆದರಿಕೆ ಹಾಕಿದ್ದಾನೆ.

ಈ ವ್ಯಕ್ತಿ ಬಂಧನದಿಂದ ತಪ್ಪಿ ಸಿಕೊಳ್ಳಲು ಕಳೆದ 40 ದಿನಗಳಲ್ಲಿ 13 ಹೋಟೇಲ್ಗಳನ್ನು ಬದಲಿಸಿದ್ದ ಎಂಬಮಾಹಿತಿ ಲಭ್ಯ ವಾಗಿದೆ.

ಸಾಮಾನ್ಯ ಟ್ಯಾ ಕ್ಸಿಯಲ್ಲಿ ಪ್ರಯಾಣಿಸುತ್ತಿದ್ದ ಸ್ವಾ ಮೀಜಿ ಸಣ್ಣ ಸಣ್ಣ ಹೋಟೇಲ್ಗಳಲ್ಲಿ ಉಳಿದುಕೊಳ್ಳುತ್ತಿದ್ದ ಎಂದು ಪೊಲೀಸ್ ಅಧಿಕಾರಿಗಳು ಹೇಳಿದ್ದಾರೆ.

ಸದ್ಯ ಪೊಲೀಸ್ ಕಸ್ಟಡಿಯಲ್ಲಿರುವ ಸ್ವಾಮಿ ಚೈತನ್ಯಾನಂದ ಸರಸ್ವತಿ ತನಿಖೆಗೆ ಸಹಕರಿಸುತ್ತಿಲ್ಲ ,ಯಾವುದೇ ಪ್ರಶ್ನೆ ಕೇಳಿದ್ರೂ ಗೊತ್ತಿಲ್ಲ ಎಂಬ ಉತ್ತರವನ್ನಷ್ಟೇ ನೀಡುತ್ತಿದ್ದು ವಿಚಾರಣೆ ವೇಳೆ ನನಗೆ ಪ್ರಧಾನಿ ನರೇಂದ್ರ ಮೋದಿ ಗೊತ್ತು , ಪ್ರಧಾನಿ ಕಚೇರಿಜೊತೆಗೆ ನೇರ ಸಂಪರ್ಕ ಹೊಂದಿದ್ದೇನೆ.

ಎಂದು ಪೊಲೀಸರನ್ನೇ ಬೆದರಿಸುವ ಪ್ರಯತ್ನ ಮಾಡಿದ್ದಾನೆ. ತನಿಖೆಯ ವೇಳೆ ಆರೋಪಿಯ ಕೊಠಡಿಯಲ್ಲಿ ಅಮೆರಿಕ ಅಧ್ಯಕ್ಷ

ಡೊನಾಲ್ಡ್ ಟ್ರಂಪ್, ಪ್ರಧಾನಮಂತ್ರಿ ನರೇಂದ್ರ ಮೋದಿ ಜೊತೆಗೆ ಛಾಯಾಚಿತ್ರಗಳು ಕಂಡುಬಂದಿವೆ, ಪ್ರಾಥಮಿಕ ತನಿಖೆಯಲ್ಲಿ ಈ

ಚಿತ್ರಗಳನ್ನು AI ಬಳಸಿ ರಚಿಸಲಾಗಿದೆ ಎಂಬುದು ತಿಳಿದುಬಂದಿದೆ. ನಕಲಿ ವಿಸಿಟಿಂಗ್ ಕಾರ್ಡ್ಗಳನ್ನು ಸಹ ಪೊಲೀಸರು ಪತ್ತೆ ಹಚ್ಚಿದ್ದು ,ವಿಶ್ವ ಸಂಸ್ಥೆ ಮತ್ತು ಬ್ರಿಕ್ಸ್ ಜೊತೆಗಿನ ಆತನ ಸಂಬಂಧ ತೋರಿಸುವಂತೆ ಮುದ್ರಿಸಲಾಗಿದೆ.

ಅವುಗಳನ್ನು ವಶಪಡಿಸಿಕೊಂಡು ಪೊಲೀಸರು ತನಿಖೆ ಆರಂಭಿಸಿದ್ದಾರೆ. ಸ್ವಾಮೀಜಿ ಬಳಿಯಿದ್ದ



ಒಂದು ಐಪ್ಯಾ ಡ್ ಮತ್ತು 3ಮೊಬೈಲ್ ಫೋನ್ಗಳನ್ನ ವಶಪಡಿಸಿಕೊಳ್ಳಲಾಗಿದೆ. ಒಂದು ಫೋನ್ನಲ್ಲಿ ಹಾಸ್ಟೆಲ್ನ ಸಿಸಿಟಿವಿ ವಿಡಿಯೋಗಳು ಪತ್ತೆಯಾಗಿದೆ. ಮೊಬೈಲ್ಮೂಲಕ ಹಾಸ್ಟೆಲ್ ಮೇಲೆ ನಿಗಾ ವಹಿಸುತ್ತಿದ್ದ ರು ಎನ್ನಲಾಗಿದೆ. ಸ್ವಾಮೀಜಿಗೆ ಸಂಬಂಧಿಸಿದ ಬಹು ಬ್ಯಾಂಕ್ ಖಾತೆಗಳು ಮತ್ತು ಸ್ಥಿ ರ ಠೇವಣಿಗಳಲ್ಲಿ ಇರಿಸಲಾಗಿದ್ದ 8 ಕೋಟಿ ರೂ.ಗಳನ್ನು ಪೊಲೀಸರು ಮುಟ್ಟು ಗೋಲು ಹಾಕಿಕೊಂಡಿದ್ದಾರೆ.

# ಮೂವರನ್ನು ಅಪಹರಿಸಿ 1.1 ಕೋಟಿ ರೂ ದೋಚಿದ್ದ 8 ಮಂದಿ ಬಂಧನ

❑ ಸ್ನೇಹಜೀವಿ ನ್ಯೂಸ್

ಬೆಂಗಳೂರು: ದಂಪತಿ ಮತ್ತು ಅವರ ಕಾರು ಚಾಲಕನನ್ನು ಅಪಹರಿಸಿ 1.1 ಕೋಟಿ ರೂಪಾಯಿ ನಗದುದೋಚಿದ್ದ ಎಂಟುಮಂದಿಯನ್ನು ಹುಳಿಮಾವು ಪೊಲೀಸರು ಬಂಧಿಸಿದ್ದಾರೆ. ಮೊನ್ನೆ ಶನಿವಾರ ಸಂಜೆ ಅಕ್ಷಯ ಪಾರ್ಕ್ ಬಳಿ ಈ ಘಟನೆ ನಡೆದಿದೆ. ವಶಪಡಿಸಿಕೊಳ್ಳಲಾದ ನಗದು ಹಣ ಹವಾಲಾ ವ್ಯ ವಹಾರಕ್ಕೆ ಸಂಬಂಧಿಸಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ.

ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೊಪ್ಪಿಸಲಾಗಿದೆ. ಆರೋಪಿಗಳನ್ನು ನರಸಿಂಹ (34ವ), ಕಾರು ಚಾಲಕ ಜೀವನ್ (27ವ), ಜಿಮ್ ತರಬೇತುದಾರ ವೆಂಕಟ್ ರಾಜ್ (28ವ), ಕಿಶೋರ್ (30), ಆಟೋರಿಕ್ಷಾ ಚಾಲಕಚಂದ್ರ (32), ಭದ್ರತಾ ಸಿಬ್ಬಂ ದಿ ರವಿ ಕಿರಣ್ (33), ಮತ್ತು ಕುಮಾರ್ ಎನ್ (36) ಮತ್ತು ನಮನ್ (18) ಎಂದು ಗುರುತಿಸಲಾಗಿದ್ದು ,

ಎಲ್ಲರೂ ಆಗ್ನೇಯ ಬೆಂಗಳೂರು ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಿವಾಸಿಗಳಾಗಿದ್ದಾರೆ. ದೂರುದಾರ ಹೇಮಂತ್ (32ವ), ಕಾರು ಚಾಲಕ, ತುಮಕೂರಿನ ಅಡಿಕೆ ವ್ಯಾ ಪಾರಿಮೋಹನ್, ರಾಜಸ್ಥಾನಮೂಲದ ಅಕ್ಷಯ ಲೇಔಟ್ ನಿವಾಸಿಗಳಾದ ರಿಯಲ್ ಎಸ್ಟೇ ಟ್ ಕರ್ಮೋಟಾ ರಾಮ್ ಅಲಿಯಾಸ್ ರಮೇಶ್ ಮತ್ತು ಅವರ ಪತ್ನಿ ಲಕ್ಷ್ಮಿ ದೇವಿ ಅವರಿಂದ ಹಣ ಸಂಗ್ರಹಿಸಲು ಕೇಳಿದ್ದ



ರು ಎಂದು ಹೇಳಿದ್ದಾರೆ. ದಂಪತಿ ಎರಡು ಚೀಲಗಳಲ್ಲಿ 1.1 ಕೋಟಿ ರೂಪಾಯಿ ನಗದು ಇತ್ತು . ಪೊಲೀಸರ ಪ್ರಕಾರ, ಹೇಮಂತ್ ಮತ್ತು ದಂಪತಿ ಶನಿವಾರ ಸಂಜೆ 6 ಗಂಟೆ ಸುಮಾರಿಗೆ ಅಕ್ಷಯ ಪಾರ್ಕ್ನಲ್ಲಿದ್ದರು.

**ಘಟನೆ ಹೇಗಾಯಿತು?**


ಆರೋಪಿಗಳ ವರ್ತನೆಯಲ್ಲಿ ಅನುಮಾನ ಬಂದು ನರಸಿಂಹ ಮತ್ತು ಜೀವನ್ ಕಾರಿನ ಬಳಿ ಬಂದು ಬಾಗಿಲು ತೆರೆಯಲು ಪ್ರಯತ್ನಿಸಿದರು. ಪೊಲೀಸರು ಎಂದು ಹೇಳಿಕೊಂಡು ಕಾರಿನಲ್ಲಿದ್ದ ವರ ವೀಡಿಯೊ ಚಿತ್ರೀ ಕರಿಸಿದರು. ದಂಪತಿ ಅವರನ್ನು ಪ್ರಶ್ನಿಸಿದಾಗ, ಇಬ್ಬ ರೂ ಅವರ ಮೇಲೆ ಹಲ್ಲೆ ನಡೆಸಿ ಅವರ ಬ್ಯಾಗ್ಗಳನ್ನು ಕಸಿದುಕೊಳ್ಳಲು ಪ್ರಯತ್ನಿಸಿದರು.

ದಂಪತಿ ತಮ್ಮ ಕಾರಿನಲ್ಲಿ ತಪ್ಪಿ ಸಿಕೊಳ್ಳುವಲ್ಲಿ ಯಶಸ್ವಿ ಯಾದರೂ, ಆರೋಪಿಗಳು ಅವರನ್ನು ಬೈಕ್ಗಳಲ್ಲಿ ಬೆನ್ನಟ್ಟಿ ನಿರ್ಜನ ಪ್ರದೇಶ ಬಳಿ ಕಾರಿಗೆ ಡಿಕ್ಕಿ ಹೊಡೆದರು. ಇತರ ನಾಲ್ವರು ಆರೋಪಿಗಳು ಸೇರಿಕೊಂಡರು. ದಂಪತಿ ಮತ್ತು ಕಾರು ಚಾಲಕನನ್ನು ಒಂದು ಶೆಡ್ಗೆ ಕರೆದೊಯ್ಯ ಲಾಯಿತು. ಅಲ್ಲಿ ಆರೋಪಿಗಳು ಬ್ಯಾಗ್ಗಳಲ್ಲಿ ಅಪಾರ ಪ್ರಮಾಣದ ನಗದು ಇರುವುದನ್ನು ಗಮನಿಸಿದರು. ನಂತರ,ಅವರು ದಂಪತಿಮೊಬೈಲ್ ಫೋನ್ಗಳನ್ನು ಕಸಿದುಕೊಂಡು, 50 ಲಕ್ಷ ರೂಪಾಯಿ ನೀಡಿದರೆಮಾತ್ರ ಅವರನ್ನು ಬಿಡುಗಡೆಮಾಡಲಾಗುವುದು ಎಂದು ಬೆದರಿಕೆ ಹಾಕಿದರು.

# ಜೀವನದಲ್ಲಿ ಏನನ್ನಾದರೂ ಸಾಧಿಸಲು ಬಯಸುವವರು..

## ಉದ್ಯೋಗ or ವ್ಯವಹಾರ? ಇವುದರಲ್ಲಿ ಯಾವುದು ಮುಖ್ಯ ಗೊತ್ತಾ?

Editor :
DR.A.N.SHALAGAR



ಶಿಕ್ಷಣಕ್ಕೆ ಈಗ ಹಿಂದೆಂದಿಗಿಂತಲೂಹೆಚ್ಚಿನ ಸೌಲಭ್ಯ ಗಳಿವೆ. ಅದಕ್ಕಾ ಗಿಯೇಬಹುತೇಕ ಎಲ್ಲರೂ ಒಂದಲ್ಲ ಒಂದು ರೀತಿಯ ಪದವಿ ಪಡೆಯುತ್ತಿದ್ದಾರೆ. ಆದರೆ, ಇಂದಿನಯುವಕರುಹೊಸ ಸಮಸ್ಯೆ ಯನ್ನು ಎದುರಿಸುತ್ತಿದ್ದಾರೆ. ಶಿಕ್ಷಣಮುಗಿದ ನಂತರ, ಅವರು ಉದ್ಯೋಗ ಪಡೆಯಬೇಕೇ?

ಅವರು ವ್ಯ ವಹಾರವನ್ನು ಪ್ರಾರಂಭಿಸಬೇಕೇ? ಅನೇಕರು ಗೊಂದಲಕ್ಕೊಳಗಾಗಿದ್ದಾರೆ. ಚೆನ್ನಾಗಿ ಓದಿದ ನಂತರ ಕೆಲಸಮಾಡಲು ಬಯಸುವವರು ನಿಯಮಿತವಾಗಿಮಾಸಿಕ ಸಂಬಳ ಪಡೆಯುತ್ತಿದ್ದಾರೆ. ಆದರೆ ಈ ರೀತಿಯ ಕೆಲಸಮಾಡಲು ಬಯಸುವವರು ಕನಸುಗಳನ್ನು ಹೊಂದಿದ್ದರೆ, ಅವರು ಶೂಟ್ಮಾಡುವುದಿಲ್ಲ . ಏಕೆಂದರೆ ಜೀವನದಲ್ಲಿ ಏನನ್ನಾ ದರೂ ಸಾಧಿಸಲು ಬಯಸುವವರಿಗೆ ಉದ್ಯೋಗಗಳುಸೂಕ್ತವಲ್ಲ. ವ್ಯ ವಹಾರವು ಸರಿಯಾದ ಕೆಲಸ. ಹಾಗಾದರೆ ಆವ್ಯ ವಹಾರವನ್ನು ಪ್ರಾರಂಭಿಸಲು ನೀವು ಏನುಮಾಡಬೇಕು? ಆದರೆ ಅದಕ್ಕೂ ಮೊದಲು, ಈ ಸಣ್ಣ ಕಥೆಯನ್ನು ಆಹಾರ ನೀಡಲು ಬಯಸುತ್ತಾರೆ. ಮಂಗಗಳಿಗೆ ಬಾಳೆಹಣ್ಣು ಗಳು ಹೆಚ್ಚು ಇಷ್ಟ . ಆದರೆ,ನೀವುಮಂಗನ ಬಳಿಗೆಹೋಗಿ ಅದಕ್ಕೆ ಒಂದು ಹಿಡಿ ಬಾಳೆಹಣ್ಣು ಗಳನ್ನು ಕೊಟ್ಟ ರೆ,ಇನ್ನೊಂದು ಕೈಯಿಂದ ಹಣ ತೋರಿಸಿದರೆ..

ಕೋತಿಮೊದಲು ಬಾಳೆಹಣ್ಣು ಗಳನ್ನು ಮಾತ್ರ ತೆಗೆದುಕೊಳ್ಳು ತ್ತದೆ. ಆದರೆ ಹಣದೊಂದಿಗೆ ಹೆಚ್ಚು ಬಾಳೆಹಣ್ಣು ಗಳು ಬರುತ್ತವೆ ಎಂದು ಅದಕ್ಕೆ ತಿಳಿದಿಲ್ಲ . ಅದೇ ರೀತಿ, ಕೆಲವು ಜನರಿಗೆ ಕೆಲಸಕ್ಕೆ ಒಂದುಮಾರ್ಗವೂ ಇರುತ್ತದೆ.. ವ್ಯಾ ಪಾರಕ್ಕಾಗಿ ಬೇರೆಮಾರ್ಗವನ್ನು ಸ್ಥಾಪಿಸಿದರೆ, ಅವರಲ್ಲಿ ಹೆಚ್ಚಿ ನವರು ಉದ್ಯೋಗಮಾರ್ಗದಮೂಲಕವೇಮುಂದುವರಿಯುತ್ತಾರೆ.

ಏಕೆಂದರೆ ವ್ಯಾ ಪಾರಮಾಡುವ ಕಲ್ಪನೆಯುಅನೇಕಯುವಕರಲ್ಲಿ ಅಪರೂಪ.

ವಾಸ್ತವವಾಗಿ, ಸಾಮಾನ್ಯ ಜೀವನವನ್ನು ನಡೆಸಲು ಬಯಸುವವರಿಗೆ ಕೆಲಸ ಒಳ್ಳೆಯದು. ಆದರೆ ಜೀವನದಲ್ಲಿ ಏನನ್ನಾದರೂ ಸಾಧಿಸಲು ಬಯಸುವವರು.. ಇತರರಿಗಿಂತ ಭಿನ್ನವಾಗಿರಲು, ಕೆಲಸದಮಾರ್ಗವನ್ನು

ಆರಿಸಿಕೊಳ್ಳಬಾರದು. ಏಕೆಂದರೆ ಅವರು ಕೆಲಸಮಾಡುವಮೂಲಕ ತಮ್ಮ ಕನಸುಗಳನ್ನು ಸಾಧಿಸಲು ಬಯಸುತ್ತಾರೆ. ಅದು ಸಾಧ್ಯವೇ ಇಲ್ಲ .

ಗುರಿ ಸಾಧಿಸಲು ಉತ್ತಮಮಾರ್ಗವೆಂದರೆ ನಿಮ್ಮ ಕೆಲಸವನ್ನು ಬಿಟ್ಟು ವ್ಯವಹಾರಕ್ಕೆ ಇಳಿಯುವುದು. ಆದರೆ, ಈ ವ್ಯವಹಾರದಲ್ಲಿ ಯಶಸ್ಸು ಸಾಧಿಸುವುದು ಅಷ್ಟು ಸುಲಭವಲ್ಲ. ಅದಕ್ಕಾಗಿ ನೀವು ತಾಳ್ಮೆ , ಧೈರ್ಯ ಮತ್ತು ಸಮಯಪಾಲನೆಯನ್ನು ಹೊಂದಿರಬೇಕು. ಇದಲ್ಲದೆ, ನೀವು ಆಯ್ಕೆ ಮಾಡುವ ವ್ಯವಹಾರವು ಸರಿಯಾಗಿರಬೇಕು. ಈ ಎಲ್ಲಾ ಗುಣಗಳನ್ನು ಬೆಳೆಸಿಕೊಂಡರೆಮಾತ್ರ ನೀವು ಯಶಸ್ವಿ ವ್ಯ ಕ್ತಿಯಾಗಬಹುದು. ಅನೇಕ ಜನರಿಗೆ ಉದ್ಯೋಗವೂ ಅಗತ್ಯ .

ಆದರೆ ಒಂದು ನಿರ್ದಿಷ್ಟ ಪ್ರಮಾಣದ ಹಣವನ್ನು ಗಳಿಸಿದ ನಂತರ, ಅನೇಕ ಜನರಿಗೆ ಜೀವನದಲ್ಲಿ ಸಾಧಿಸುವ ಬಯಕೆ ಇರುತ್ತದೆ. ಅಂತಹ ಜನರು ವ್ಯವಹಾರದಮೂಲಕಮಾತ್ರ ತಮ್ಮ ಜೀವನದಲ್ಲಿ ಏನನ್ನಾ ದರೂ ಸಾಧಿಸಬಹುದು. ಇದಲ್ಲದೆ, ಉದ್ಯೋಗ ಮತ್ತು ವ್ಯವಹಾರ ಎರಡನ್ನೂ ಹೊಂದಿರುವುದು ಒಳ್ಳೆಯದಲ್ಲ .

ವ್ಯವಹಾರವನ್ನು ಪ್ರಾರಂಭಿಸಲು ಬಯಸುವವರು ಎಲ್ಲವನ್ನೂ ತಮ್ಮ ತಟ್ಟೆಯಲ್ಲಿ ಇಟ್ಟು ಕೊಂಡು ಲಾಭ ಗಳಿಸುವ ನಿರೀಕ್ಷೆಯನ್ನು ಹೊಂದಿರಬಾರದು. ಏಕೆಂದರೆ ವ್ಯವಹಾರವು ಯಶಸ್ವಿ ಯಾಗಲು ಬಹಳ ಸಮಯ ತೆಗೆದುಕೊಳ್ಳು ತ್ತದೆ.

ಇದಕ್ಕೆ ಸಾಕಷ್ಟು ತಾಳ್ಮೆ ಬೇಕು. ಅಂತಹ ವಿಶೇಷ ಗುಣಗಳನ್ನು ಹೊಂದಿರುವವರುಮಾತ್ರ ವ್ಯ ವಹಾರದತ್ತ ಗಮನ ಹರಿಸಬೇಕು. ಮತ್ತೊಂದೆಡೆ, ಆರ್ಥಿಕವಾಗಿ ಸ್ಥಿರರಾಗಿರುವವರು ಮಾತ್ರ ವ್ಯವಹಾರಕ್ಕೆ ಇಳಿಯುವುದು ಉತ್ತಮ.

# 8 ರಿಂದ 10 ಜನ ಹಿಗ್ಗಾಮುಗ್ಗಾ ಪೊಲೀಸರು ಥಳಿಸಿದ್ದಾರೆ:

## ಹಪ್ತಾ ಕೊಡಲೇಬೇಕೆಂದು ಪೀಡಿಸುತ್ತಿದ್ದ ಪೊಲೀಸರು...!

❑ ಸ್ನೇಹಜೀವಿ ನ್ಯೂಸ್

**ಧಾರವಾಡ,ಸೆ 29: ಸೇನೆಯಿಂದ ನಿವೃತ್ತಿಹೊಂದಿದ್ದ ಸೈನಿಕರೊಬ್ಬರು ಧಾರವಾಡದಲ್ಲಿ ವಿದ್ಯಾರ್ಥಿಗಳಿಗಾಗಿ ಪಿಜಿ ಮತ್ತು ಮೆಸ್ ನಡೆಸುತ್ತಿದ್ದರು. ಕಡಿಮೆ ದರದಲ್ಲಿ ಊಟ, ವಸತಿ ಕೊಡುತ್ತಿದ್ದರು.ಆದರೆ ಅವರ ಮೇಲೆ ಕಳೆದ ರಾತ್ರಿ ಅಟ್ಯಾಕ್ ಆಗಿದ್ದು, 8 ರಿಂದ 10 ಜನ ಹಿಗ್ಗಾಮುಗ್ಗಾ ಥಳಿಸಿದ್ದಾರೆ.**

ಮಾಜಿ ಸೈನಿಕನ ಮೇಲೆ ಪೊಲೀಸರಿಂದ ದುಂಡಾವರ್ತನೆ ಆರೋಪ ದೇಶ ಸೇವೆಮಾಡಿ ನಿವೃತ್ತಿಯಾದ ನಂತರ ರಾಮಪ್ಪ ನಿಪ್ಪಾಣಿ, ಧಾರವಾಡದ ಸಪ್ತಾಪುರ ಬಾವಿ ಬಳಿ ಪಿಜಿ ಮತ್ತು ಮೆಸ್ ನಡೆಸಿಕೊಂಡು ಜೀವನ ನಡೆಸುತ್ತಿದ್ದರು. ಕಡಿಮೆ ದರಕ್ಕೆ ಊಟ ಮತ್ತು ವಸತಿ ವ್ಯವಸ್ಥೆ ಕಲ್ಪಿಸಿದ್ದರಿಂದ ಹೆಚ್ಚಿನ ವಿದ್ಯಾರ್ಥಿಗಳು ಇಲ್ಲಿ ಊಟಕ್ಕೆ ಬರುತ್ತಿದ್ದರು.

ಆದರೆ ಕಳೆದ ರಾತ್ರಿ ಸೆ.28 ಹನ್ನೊಂದು ಗಂಟೆ ಸಮಯದ್ಲಲಿ ಸಪ್ತಾಪುರ ಬಾವಿ ಬಳೀಯಿರುವ ಸೈನಿಕ್ ಮೆಸ್ಗೆ ಆಗಮಿಸಿದ್ದ




ಧಾರವಾಡ ಉಪನಗರ ಠಾಣೆಯ ಪೊಲೀಸರು ಮೆಸ್ ಗೇಟ್ ಹಾಕುವಂತೆ ರಾಮಪ್ಪಗೆ ಹೇಳಿದ್ದಾರೆ.

ಇನ್ನೂ ನಾಲ್ಕೈದು ವಿದ್ಯಾರ್ಥಿಗಳು ಊಟಕ್ಕೆ ಬರುವವರಿದ್ದಾರೆ ಸರ್ ಎಂದು ಹೇಳಿದ್ದಾರೆ. ಇದೇ ವಿಚಾರಕ್ಕೆ ಪೊಲೀಸರು ಮತ್ತು ರಾಮಪ್ಪನ ನಡುವೆಮಾತಿನ ಚಕಮಕಿ ನಡೆದಿದೆ. ಈ ಸಮಯದಲ್ಲಿ ರಾಮಪ್ಪ ನಿಪ್ಪಾಣಿ ಮೇಲೆ ಉಪನಗರ ಠಾಣೆಯ ಎಂಟರಿಂದ ಹತ್ತು ಪೊಲೀಸರು ಹೆಲ್ಮೆಟ್ ಸೇರಿದಂತೆ ಅನೇಕ ವಸ್ತುಗಳಿಂದ ಹಿಗ್ಗಾಮುಗ್ಗಾ ಥಳಿಸಿದ್ದಾರೆ.

ರಾಮಪ್ಪಗೆ ಥಳಿಸಿದ್ದಲ್ಲದೇ, ಮೆಸ್ನಲ್ಲಿ ಕೆಲಸಮಾಡುತ್ತಿದ್ದ ಹುಡುಗರಿಗೆ ಕೂಡಾ ಥಳಿಸಿದ್ದಾರೆ. ಮೆಸ್ನಲ್ಲಿರುವ ಟೇಬಲ್, ಕುರ್ಚಿಗಳನ್ನು ಮುರಿದು, ನಂತರ ಮೆಸ್ನಲ್ಲಿದ್ದ ಸಿಸಿಟಿವಿ ಫುಟೇಜ್, ಮೊಬೈಲ್ಗಳನ್ನು ತಗೆದುಕೊಂಡು ಹೋಗಿದ್ದಾರೆ.

ಈ ಕೃತ್ಯ ಎಸಗಿದವರು ಸ್ವತಃ ಪೊಲೀಸರೇ. ಹಪ್ತಾ ಕೊಡದೇ ಇದ್ದಿದ್ದ ಕ್ಕೆ ಪೊಲೀಸರು ಹಿಗ್ಗಾಮುಗ್ಗಾ ಥಳಿಸಿದ್ದಾರೆ ಎಂದು ಮಾಜಿ ಸೈನಿಕ ಆರೋಪ ಮಾಡಿದ್ದಾರೆ.

### ಹಪ್ತಾ ಕೊಡಲೇಬೇಕೆಂದು ಪೀಡಿಸುತ್ತಿದ್ದ ಪೊಲೀಸರು..

ಇನ್ನು ತನಗೆ ಈ ಹಿಂದೆ ಪ್ರತಿ ತಿಂಗಳು ನಾಲ್ಕೈದು ಸಾವಿರ ಹಣವನ್ನು ಹಪ್ತಾ ನೀಡುವಂತೆ ಪೊಲೀಸರು ಹೇಳುತ್ತಿದ್ದ ರು. ನಾನು ಮಾಜಿ ಸೈನಿಕ, ನಾನುಯಾರಿಗೂ ಹಪ್ತಾ ನೀಡಲ್ಲಾ ಎಂದು ಹೇಳಿದ್ದೆ . ಎಲ್ಲರೂ ಹಪ್ತಾ ನೀಡುತ್ತಾರೆ ನೀನುಯಾಕೆ ನೀಡಿಲ್ಲಾ ಎಂದು ಪೊಲೀಸರು ಮೇಲಿಂದ ಮೇಲೆ ಕಿರುಕುಳ ನೀಡುತ್ತಿದ್ದರು. ನಿನ್ನೆ ರಾತ್ರಿ ಬಂದು ಮನಸೋ ಇಚ್ಛೆ ಥಳಿಸಿದ್ದಾರೆ ಎಂದು ರಾಮಪ್ಪ ಆರೋಪಿಸುತ್ತಿದ್ದಾರೆ.

ನ್ಯಾಯ ನೀಡಬೇಕಾದ ಪೊಲೀಸರೇ ಅನ್ಯಾಯ ಮಾಡಿದ್ದಾರೆ ಅಂತ ರಾಮಪ್ಪನ ಸಹೋದರ ಆರೋಪಿಸಿದ್ದಾರೆ.

ಸದ್ಯ ಧಾರವಾಡ ಉಪನಗರ ಪೊಲೀಸ್ ಠಾಣೆ ಪೊಲೀಸರ ವಿರುದ್ಧ ಕುಟುಂಬ ಇದೀಗದೂರು ನೀಡಲುಮುಂದಾಗಿದೆ. ಮೇಲಾಧಿಕಾರಿಗಳು ಈ ಬಗ್ಗೆ ಪರಿಶೀಲನೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕಿದ.

Snehajeevi Kannada Daily, Printed and Published and owned by ABDULHAMEED SHALAGAR House No. 6421 Rajput Oni, Betageri-Gadag, State : Karnataka
Editor : ABDULHAMEED SHALAGAR, Printed at : Prabhu Graphics, 3094A, Station Road Gadag, District Gadag 582 101 State : Karnataka